

# ಬೆಳಗಾವಿ ವರದಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

Read,Share and Follow - www.belagavivaradi.com

Vol-04 | Issue: 277 | ₹ ಬೆಲೆ: 4 | Friday, 29, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಅಂಗಡಿ, ಮಾಲ್‌ಗಳಲ್ಲಿ ಕನ್ನಡ ಭಾಷೆಯಲ್ಲಿ ನಾಮಫಲಕ: ಶೀಘ್ರವೇ ಸುಗ್ರೀವಾಜ್ಞೆ

ಬೆಂಗಳೂರು: ಅಂಗಡಿ, ಮಾಲ್‌ಗಳ ನಾಮಫಲಕಗಳು ಕನ್ನಡ ಭಾಷೆಯಲ್ಲೇ ಇರಲು ಸರ್ಕಾರ ಸುಗ್ರೀವಾಜ್ಞೆ ಹೊರಡಿಸಲು ಮುಂದಾಗಿದೆ.

ಅಂಗಡಿ ಮುಗ್ಗಟ್ಟುಗಳ ಮುಂಭಾಗದಲ್ಲಿ ಕನ್ನಡ ನಾಮಫಲಕ ಅಳವಡಿಸುವ ಸಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಉನ್ನತ ಮಟ್ಟದ ಸಭೆ ನಡೆಸಿದರು. ಗೃಹ ಸಚಿವ ಪರಮೇಶ್ವರ್, ಬಿಬಿಎಂಪಿ, ಗೃಹ ಇಲಾಖೆ ಅಧಿಕಾರಿಗಳು, ಕನ್ನಡ ಮತ್ತು ಸಂಸ್ಕೃತ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗಿಯಾಗಿದ್ದರು.

ಸಭೆಯ ಬಳಿಕ ಮಾತನಾಡಿದ ಸಿದ್ದರಾಮಯ್ಯ, ಅಧಿವೇಶನ ಇಲ್ಲದೆ ಇರುವುದರಿಂದ ಸುಗ್ರಿವಾಜ್ಞೆ ಹೊರಡಿಸುತ್ತಿದ್ದೇವೆ. ಫೆಬ್ರವರಿ 28ರ ಒಳಗೆ 60% ಕನ್ನಡ ಫಲಕ ಇರಬೇಕು. ಇದಲ್ಲದೆ ಸಾರ್ವಜನಿಕರಿಗೆ ನೀಡುವ ಮಾಹಿತಿ ಮತ್ತು ಜಾಹಿರಾತುಗಳನ್ನು ಕನ್ನಡದಲ್ಲಿ ಇರಬೇಕು. ಎಷ್ಟು ಪ್ರಮಾಣದಲ್ಲಿ ಇರಬೇಕು ಎಂಬುದನ್ನು ಸರ್ಕಾರ ನಿಗದಿ ಮಾಡಲಿದೆ. ಕನ್ನಡ ಆಡಳಿತ ಭಾಷೆ. ಇದರಲ್ಲಿ ನಾವು ಯಾವುದೇ ರಾಜಿ ಮಾಡುವುದಿಲ್ಲ ಎಂದರು.



ಬಿಜೆಪಿ ಅವಧಿಯಲ್ಲಿ 2022 ರಲ್ಲಿ ಪಾಸ್ ಆಗಿದ್ದ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ ಸೆಕ್ಷನ್ 17(6) ರಲ್ಲಿ ನಾಮಫಲಕಗಳು ಅರ್ಧದಷ್ಟು ಕನ್ನಡ ಭಾಷೆ ಕೆಳಭಾಗದ ಅರ್ಧ ಬೇರೆ ಭಾಷೆಯಲ್ಲಿ ಇರಬೇಕು ಅಂತ ಎರಡು ಸದನದಲ್ಲಿ ಕಾಯ್ದೆ ಪಾಸ್ ಆಗಿ ರಾಜ್ಯಪಾಲರ ಅಂಕಿತ ಕೂಡಾ ಆಗಿತ್ತು. ಆದರೆ ಅರ್ಧ ಭಾಗ ಮಾತ್ರ ಕನ್ನಡ ಇರಬೇಕು ಎಂಬ ನಿಯಮದ ಬದಲಾಗಿ,ಸಿದ್ದರಾಮಯ್ಯ ಸರ್ಕಾರ 2018 ರಲ್ಲಿ ಹೊರಡಿಸಿದ್ದ ಸುತ್ತೋಲೆ ಅನ್ವಯ 60%ಕನ್ನಡ ನಾಮ ಫಲಕ, 40% ಇತರೇ ಭಾಷೆ ಬಳಕೆ ನಿಯಮವನ್ನೇ ಜಾರಿ ಮಾಡಲು ಸರ್ಕಾರ ನಿರ್ಧಾರ ಮಾಡಿದೆ. ಈ ಸಂಬಂಧ ತಿದ್ದುಪಡಿ ನಿಯಮಕ್ಕೆ ಸುಗ್ರಿವಾಜ್ಞೆ ಹೊರಡಿಸಲು ಸಿಎಂ ಸೂಚನೆ ನೀಡಿದ್ದಾರೆ.

ಎರಡು ಸದನದಲ್ಲಿ ಮಸೂದೆ ಪಾಸ್ ಆಗಿ ರಾಜ್ಯಪಾಲರ ಸಹಿ ಹಾಕಿದ್ದಾರೆ. ಆದರೆ ಇನ್ನೂ ನಿಯಮ ಮಾಡಿಲ್ಲ. ಹೀಗಾಗಿ ಕೂಡಲೇ ರೂಲ್ಸ್ ಫ್ರೇಮ್ ಮಾಡಲು ಸೂಚನೆ ನೀಡಿದ್ದೇನೆ. ನಿಯಮ ಸೇರಿಸಿದ ನಂತರ ಒಂದೆರಡು ದಿನಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೂಲಕ ಸುಗ್ರಿವಾಜ್ಞೆ ಜಾರಿ ಆಗಲಿದ್ದು, 60% ಕಡ್ಡಾಯ ನಾಮ ಫಲಕ ನಿಯಮ ಅಧಿಕೃತವಾಗಿ ಜಾರಿ ಆಗಲಿದೆ. ಇದೇ ಅಲ್ಲದೆ ಸಾರ್ವಜನಿಕರ ಮಾಹಿತಿಗೆ ನೀಡುವ ಜಾಹಿರಾತು ಮತ್ತು ಸೂಚನಾ ಫಲಕಗಳು ಕೂಡಾ ಕನ್ನಡದಲ್ಲಿ ಇರಬೇಕು ಎಂಬ ನಿಯಮ 2022ರ ಕಾಯ್ದೆಯಲ್ಲಿ ಇದೆ. ಎಷ್ಟು ಪ್ರಮಾಣದಲ್ಲಿ ಕನ್ನಡದಲ್ಲಿ ಮಾಹಿತಿ ಇರಬೇಕು ಅಂತ ಸರ್ಕಾರ ನಿರ್ಧಾರ ಮಾಡಲಿದೆ ಅಂತ ಸಿದ್ದರಾಮಯ್ಯ ತಿಳಿಸಿದರು.

ಕರವೇ ಹೋರಾಟದ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ, ಪ್ರತಿಭಟನೆ ಮಾಡಲು ಅವಕಾಶ ಇದೆ. ಆದರೆ ಯಾರು ಕಾನೂನು ಕೈಗೆ ಎತ್ತಿಕೊಳ್ಳಬಾರದು. ಯಾರೇ ಕಾನೂನು ಕೈಗೆ ಎತ್ತುಕೊಂಡರೆ ಸರ್ಕಾರ ಸಹಿಸುವುದಿಲ್ಲ. ನಮ್ಮ ಸರ್ಕಾರ ಕನ್ನಡದ ಪರ ಇದೆ. ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆ ಇದರಲ್ಲಿ ಯಾವುದೇ ರಾಜೀ ಇಲ್ಲ ಅಂತ ಸ್ಪಷ್ಟನೆ ನೀಡಿದರು.

ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡುವುದರಿದ್ದರೆ ಫ್ರೀಡಂ ಪಾರ್ಕ್‌ನಲ್ಲಿ ಮಾತ್ರ ಮಾಡಬೇಕು ಎಂದು ಹೈಕೋರ್ಟ್ ಆದೇಶದಲ್ಲಿದೆ. ರಾಜ್ಯ ಸರ್ಕಾರ ಇದರ ಪಾಲನೆಗೆ ಕ್ರಮ ತೆಗೆದುಕೊಳ್ಳಬೇಕು ಅಂತ ಸೂಚನೆ ನೀಡಿದೆ. ಕೋರ್ಟ್ ಆದೇಶ ಇದ್ದರೂ ಸಾರ್ವಜನಿಕ ಹಿತ, ರಾಜ್ಯದ ಹಿತಕ್ಕೆ ಪ್ರತಿಭಟನೆ ಮಾಡಿದರೆ ವಿರೋಧ ಮಾಡುವುದಿಲ್ಲ. ಶಾಂತಿಯುತ ಪ್ರತಿಭಟನೆ ಮಾಡಬೇಕು. ಆದರೆ ಕಾನೂನು ಕೈಗೆ ಎತ್ತುಕೊಂಡರೆ ಸರ್ಕಾರ ಕ್ರಮ ತೆಗೆದುಕೊಳ್ಳಲಿದೆ ಎಂದರು.

### ಕಾನೂನು ಕೈಗೆತ್ತಿಕೊಂಡಿದ್ದಕ್ಕೆ ಕರವೇ ವಿರುದ್ಧ ಕ್ರಮ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಕನ್ನಡ ನಾಮಫಲಕ ಅಳವಡಿಸುವ ಸಂಬಂಧ ಕರ್ನಾಟಕ ರಕ್ಷಣಾ ವೇದಿಕೆ ಪ್ರತಿಭಟನೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ, ಕಾನೂನು ರೀತಿ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

## ಭಾರತ ಚುನಾವಣಾ ಆಯೋಗ: ಮತದಾರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2024ರ ಪರಿಷ್ಕೃತ ವೇಳಾ ಪಟ್ಟಿ ಪ್ರಕಟ

ಬೆಳಗಾವಿ: ಭಾರತ ಚುನಾವಣಾ ಆಯೋಗ ಡಿ.26 ರಂದು ಮತದಾರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2024ರ ಪರಿಷ್ಕೃತ ವೇಳಾ ಪಟ್ಟಿಯನ್ನು ಪ್ರಕಟಿಸಿದೆ.


ಮತದಾರ ಪಟ್ಟಿಯ ಕುರಿತು ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿ ಡಿ.26 ರಂದು ನಿಗದಿಪಡಿಸಿದ್ದು, ದಿನಾಂಕವನ್ನು ಪರಿಷ್ಕರಿಸಿ ಜನವರಿ 12, 2024 ರಂದು ನಿಗದಿಪಡಿಸಲಾಗಿದೆ.

ಅದೇ ರೀತಿಯಲ್ಲಿ ಆರೋಗ್ಯ ನಿಯತಾಂಕಗಳನ್ನು ಪರಿಶೀಲಿಸುವುದು ಮತ್ತು ಅಂತಿಮ ಪ್ರಕಟಣೆಗೆ ಆಯೋಗಗಳ ಅನುಮತಿಯನ್ನು ಪಡೆಯುವುದು.

ಡೇಟಾಬೇಸ್ ಅನ್ನು ನವೀಕರಿಸುವುದು ಮತ್ತು ಪೂರಕಗಳ ಮುದ್ರಣಕ್ಕೆ ಜನವರಿ 1, 2024 ರಂದು ದಿನಾಂಕ ನಿಗದಿಪದಡಿಸಿದ್ದು, ಅದನ್ನು ಜನವರಿ 17, 2024 ದಿನಾಂಕ ಎಂದು ಪರಿಷ್ಕರಿಸಲಾಗಿದೆ.

ಮತದಾರ ಪಟ್ಟಿಯ ಅಂತಿಮ ಪ್ರಕಟಣೆ ಜನವರಿ 5, 2024 ರಂದು ನಿಗದಿಪಡಿಸಿದ ದಿನಾಂಕವನ್ನು ಜನವರಿ 22, 2024 ಪರಿಷ್ಕರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಣ ಸಚಿವ ಮಧು ಬಂಗಾರಪ್ಪ ಪ್ರಯಾಣಿಸ್ತಿದ್ದ ಕಾರು ಅಪಘಾತ



ತುಮಕೂರು: ಶಿಕ್ಷಣ ಸಚಿವ ಮಧು ಬಂಗಾರಪ್ಪ ಪ್ರಯಾಣಿಸುತ್ತಿದ್ದ ಕಾರು ಅಪಘಾತ ಸಂಭವಿಸಿದ ಘಟನೆ ನಡೆದಿದೆ.

ತುಮಕೂರಿನ ನಂದಿಹಳ್ಳಿಯ ಹೆದ್ದಾರಿಯಲ್ಲಿ ಬುಧವಾರ ರಾತ್ರಿ 12 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ. ಚಲಿಸುತ್ತಿದ್ದ ಲಾರಿಗೆ ಕಾರು ಹಿಂಭಾಗದಿಂದ ಗುದ್ದಿದೆ, ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ಜಖಂ ಆಗಿದೆ.

ಕಾರಿನಲ್ಲಿ ಸಚಿವರು ಸೇರಿ ಮೂವರು ಪ್ರಯಾಣಿಸುತ್ತಿದ್ದು, ಎಲ್ಲರೂ ಬಚಾವ್ ಆಗಿದ್ದಾರೆ. ಶಿವಮೊಗ್ಗದಿಂದ ಬೆಂಗಳೂರಿಗೆ ಹೋಗುವಾವ ಮಾರ್ಗ ಮಧ್ಯೆ ಈ ದುರಂತ ಸಂಭವಿಸಿದ್ದು ಬದಲಿ ವಾಹನ ವ್ಯವಸ್ಥೆ ಮಾಡಿಕೊಂಡು ಸಚಿವರು ಬೆಂಗಳೂರಿಗೆ ತೆರಳಿದ್ದಾರೆ. ಈ ಸಂಬಂಧ ಕ್ಯಾತಸಂದ್ರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅನಿಲ ಸಂಪರ್ಕ ಗ್ರಾಹಕರು ಇ-ಕೆವೈಸಿ ಮಾಡಿಸುವುದು ಕಡ್ಡಾಯ: ಆಹಾರ ಇಲಾಖೆ ಸೂಚನೆ



ತುಮಕೂರು: ಕೇಂದ್ರ ಸರ್ಕಾರ ಸ್ವಾಮ್ಯದ ಐ.ಓ.ಸಿ., ಬಿ.ಪಿ.ಸಿ., ಮತ್ತು ಹೆಚ್.ಪಿ.ಸಿ. ಕಂಪನಿಗಳಿಂದ ಲೈಸೆನ್ಸ್ ಪಡೆದಿರುವ ಗ್ಯಾಸ್ ಏಜೆನ್ಸಿಗಳಲ್ಲಿ ಅನಿಲ ಸಂಪರ್ಕ ಹೊಂದಿರುವ ಗ್ರಾಹಕರು ಇ-ಕೆವೈಸಿ ಮಾಡಿಸುವುದು ಕಡ್ಡಾಯ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ ತಿಳಿಸಿದ್ದಾರೆ.

ಅನಿಲ ಸಂಪರ್ಕ ಹೊಂದಿರುವ ಗ್ರಾಹಕರ ನೈಜತೆಯನ್ನು ಪರಿಶೀಲಿಸಿ, ಅರ್ಹರಲ್ಲದವರನ್ನು ಕೈಬಿಡುವ ಉದ್ದೇಶದಿಂದ ಅನಿಲ ಸಂಪರ್ಕ ಗ್ರಾಹಕರ ಇ-ಕೆವೈಸಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಇ-ಕೆವೈಸಿಯನ್ನು ಆಧಾರ್ ಆಧಾರಿತ ಬೆರಳಚ್ಚು ಮತ್ತು ಫೇಸ್ ಆರ್ಡಿ. ಮೂಲಕ ಮಾಡಲಾಗುವುದು. ಸಾರ್ವಜನಿಕರು ಸಂಬಂಧಿಸಿದ ಗ್ಯಾಸ್ ಏಜೆನ್ಸಿಗೆ ತೆರಳಿ ಇ-ಕೆವೈಸಿ ಮಾಡಿಸಬಹುದು ಅಥವಾ ಭರ್ತಿ ಸಿಲಿಂಡರ್ ನೀಡಲು ಬರುವ ಡೆಲಿವರಿ ಹುಡುಗರ ಬಳಿಯೂ ಸಹ ಇ-ಕೆವೈಸಿ ಮಾಡಿಸಬಹುದು.

ಇ-ಕೆವೈಸಿ ಮಾಡಿಸಲು ಇದುವರೆಗೂ ಯಾವುದೇ ಕಾಲಬದ್ಧ ಮಿತಿಯನ್ನು ವಿಧಿಸಿರುವುದಿಲ್ಲ. ಗ್ರಾಹಕರು ಯಾವುದೇ ವದಂತಿಗಳಿಗೆ ಕಿವಿಗೊಡದೆ ಸಂಬಂಧಿಸಿದ ಗ್ಯಾಸ್ ಏಜೆನ್ಸಿಗಳಿಗೆ ತೆರಳಿ ಇ-ಕೆವೈಸಿ ಮಾಡಿಸಿಕೊಳ್ಳುವ ಮೂಲಕ ಅನಿಲ ಸಂಪರ್ಕ ಗ್ರಾಹಕತ್ವದ ತಮ್ಮ ನೈಜತೆಯನ್ನು ಸಾಬೀತುಪಡಿಸಲು ಸೂಚಿಸಲಾಗಿದೆ.

ಒಂದು ವೇಳೆ ತಮಗೆ ಸದರಿ ವಿಷಯದ ಸಂಬಂಧ ಯಾವುದಾದರೂ ಗೊಂದಲ ಇದ್ದಲ್ಲಿ ಮತ್ತು ಮಾಹಿತಿ ಕೊರತೆ ಇದ್ದಲ್ಲಿ ಸಂಬಂಧಿಸಿದ ಗ್ಯಾಸ್ ಏಜೆನ್ಸಿಯವರನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದಾಗಿದೆ ಎಂದು ಅವರು ಸೂಚಿಸಿದ್ದಾರೆ.

## ಲಖನ್ ಜಾರಕಿಹೊಳಗೆ ಗಣ್ಯರಿಂದ ಸತ್ಕಾರ



ಹುಕ್ಕೇರಿ: ಜಾರಕಿಹೊಳಿ ಮನೆತನ ಮೊದಲಿನಿಂದಲೂ ಧಾರ್ಮಿಕತೆಗೆ ಹೆಚ್ಚು ಒತ್ತು ನೀಡುತ್ತ ಬಂದಿದೆ ಎಂದು ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಹೇಳಿದರು.

ತಾಲೂಕಿನ ಎಲಿಮುನ್ನೋಳಿ ಗ್ರಾಮದ ಲಕ್ಷ್ಮೀ ದೇವಸ್ಥಾನದ ಸದ್ಭಕ್ತರು ಹಮ್ಮಿಕೊಂಡಿದ್ದ ಸತ್ಕಾರ ಸ್ವೀಕರಿಸಿ ಅವರು ಮಾತನಾಡಿದರು.

ಎಲಿಮುನ್ನೋಳಿ ಮತ್ತು ಹೆಬ್ಬಾಳ ಗ್ರಾಮದಲ್ಲಿ ಸಮುದಾಯ ಭವನ ಕಾಮಗಾರಿಗೆ 2023-24ನೇ ಸಾಲಿನ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಿಂದ ತಲಾ 5 ಲಕ್ಷ ರೂ. ಗಳಂತೆ 10 ಲಕ್ಷ ರೂ. ಅನುದಾನ ಬಿಡುಗಡೆ ಮಾಡಿಸಿರುವೆ.

ಧಾರ್ಮಿಕ ಕಾರ್ಯಕ್ರಮ ಕೈಗೊಳ್ಳಲು ಅನುಕೂಲವಾಗುವಂತೆ ಸಮುದಾಯ ಭವನ ನಿರ್ಮಿಸುವ ಜತೆಗೆ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಈ ವೇಳೆ ಮುಖಂಡರಾದ ರೋಹಿತ್ ಚೌಗಲಾ, ಬಾಹುಬಲಿ ಸೊಲ್ಲಾಪುರೆ, ಜಿನಗೌಡ ಇಮಗೌಡನವರ, ಕಲಗೌಡ ಮಲಗೌಡನವರ, ಅಶೋಕ ಮಲಗೌಡನವರ, ಮಹೇಂದ್ರ ಮಲಗೌಡನವರ, ಅಪ್ಪಾಸಾಹೇಬ ಇಮಗೌಡನವರ, ಭರತೇಶ ಮಲಗೌಡನವರ ಇತರರಿದ್ದರು.

## ಗೃಹ ಸಚಿವ ಪರಮೇಶ್ವರ್ ಗೆ ಹೆಬ್ಬಾರ್-ಸೋಮಶೇಖರ್ ಭೇಟಿ



ಬೆಂಗಳೂರು: ಬಿಜೆಪಿಯ ಶಾಸಕರಾದ ಎಸ್.ಟಿ. ಸೋಮಶೇಖರ್ ಮತ್ತು ಶಿವರಾಂ ಹೆಬ್ಬಾರ್ ಇಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಭೇಟಿ ಮಾಡಿ ಕ್ಷೇತ್ರದ ಕುರಿತು ಸಮಾಲೋಚನೆ ನಡೆಸಿದ್ದಾರೆ.

ಬಿಜೆಪಿಯಲ್ಲಿ ಬಂಡಾಯಗಾರರೆಂದೇ ಇತ್ತೀಚೆಗೆ ಗುರುತಿಸಿಕೊಂಡಿರುವ ಈ ಇಬ್ಬರು ಮಾಜಿ ಸಚಿವರು ಕಾಂಗ್ರೆಸ್ನತ್ತ ಮುಖ ಮಾಡಿದ್ದಾರೆಂದು ಹೇಳಲಾಗುತ್ತಿದೆ. ಅದಕ್ಕೆ ಪೂರಕ ಎಂಬಂತೆ ಬಿಜೆಪಿಯ ಚಟುವಟಿಕೆಗಳಿಂದ ಇಬ್ಬರೂ ದೂರ ಉಳಿದಿದ್ದಾರೆ.

ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದ ವೇಳೆ ಕಾಂಗ್ರೆಸ್ ಶಾಸಕಾಂಗ ಸಭೆಯ ಸದಸ್ಯರಿಗಾಗಿ ಆಯೋಜಿಸಿದ್ದ ಭೋಜನಾ ಕೂಟದಲ್ಲೂ ಈ ಇಬ್ಬರೂ ಶಾಸಕರು ಕಾಣಿಸಿಕೊಂಡಿದ್ದರು. ಇಂದು ಬೆಳಿಗ್ಗೆ ಗೃಹಸಚಿವರ ಭೇಟಿಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಯಶವಂತಪುರ ಕ್ಷೇತ್ರದ ಶಾಸಕ ಎಸ್.ಟಿ.ಸೋಮಶೇಖರ್, ತಮ್ಮ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಪಟ್ಟಂತೆ ಸಚಿವರ ಜೊತೆ ಚರ್ಚೆ ಮಾಡಿದ್ದೇನೆ. ಸಂಚಾರ ದಟ್ಟಣೆ ಹೆಚ್ಚಿರುವ ಮಾಗಡಿ ರಸ್ತೆಗೆ ಪ್ರತ್ಯೇಕ ಪೊಲೀಸ್ ಠಾಣೆ ಮತ್ತು ಬ್ಯಾಡರಹಳ್ಳಿ ಪೊಲೀಸ್ ಠಾಣೆಯನ್ನು ವಿಭಜಿಸಿ ಹೊಸದಾಗಿ ಅಂದ್ರಳ್ಳಿ ಪೆಪೊಲೀಸ್ ಠಾಣೆ ಮಾಡುವಂತೆ ಸಚಿವರ ಗಮನಕ್ಕೆ ತಂದಿದ್ದೇವೆ ಎಂದರು.

ಬಂಡಾಯಗಾರರು ಪಕ್ಷ ವಿರೋಧಿ ಚಟವಟಿಕೆಗಳನ್ನು ನಡೆಸುವವರ ವಿರುದ್ಧ ಕ್ರಮ ಕೈಗೊಳ್ಳುವ ಕಾಲ ಬಂದಿದೆ ಎಂದು ಬಿಜೆಪಿ ಸಂಸದ ಸದಾನಂದಗೌಡ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿದ ಎಸ್.ಟಿ.ಸೋಮಶೇಖರ್, ಅವರು ಸರಿಯಾಗಿಯೇ ಹೇಳಿದ್ದಾರೆ. ನಾವೇನು ಪಕ್ಷವಿರೋಧಿ ಚಟುವಟಿಕೆ ನಡೆಸುತ್ತಿಲ್ಲ ಎಂದು ಹೇಳಿದರು. ಪಕ್ಷದಲ್ಲಿ ಹೇಳುವವರಿಲ್ಲ, ಕೇಳುವವರಿಲ್ಲ ಎಂಬುದು ಸರಿಯಲ್ಲ. ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿದ್ದಾರೆ. ಆರ್.ಅಶೋಕ್ ಅವರು ವಿಧಾನಸಭೆಯ ವಿರೋಧಪಕ್ಷದ ನಾಯಕರಾಗಿದ್ದಾರೆ. ಇತ್ತೀಚೆಗೆ ಹೊಸ ಕಾರ್ಯಕಾರಿ ಸಮಿತಿಯನ್ನು ರಚಿಸಲಾಗಿದೆ. ಇದು ರಾಷ್ಟ್ರೀಯ ಪಕ್ಷ, ಕಾಲಕ್ಕನುಗುಣವಾಗಿ ಎಲ್ಲವೂ ನಡೆಯುತ್ತವೆ ಎಂದರು.

ಬಿಜೆಪಿಯಲ್ಲಿ ನಾವು ಆರಾಮಾಗಿದ್ದೇವೆ ಎಂದ ಸೋಮಶೇಖರ್, ಕೋವಿಡ್ ಸಂದರ್ಭದಲ್ಲಿ 40 ಸಾವಿರ ಕೋಟಿ ರೂ. ಹಗರಣ ಆಗಿದೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆ ನೀಡಿದ ವೇಳೆ ತಾವು ಊರಿನಲ್ಲಿ ಇರಲಿಲ್ಲ ಎಂದು ಜಾರಿಕೊಂಡರು. ಶಿವರಾಂ ಹೆಬ್ಬಾರ್ರವರು ಮಾತನಾಡಿ, ತಮ್ಮ ಕ್ಷೇತ್ರದಲ್ಲಿ ಪೊಲೀಸ್ ಇಲಾಖೆಯಿಂದ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸಚಿವರ ಜೊತೆ ಚರ್ಚೆ ನಡೆಸಿದ್ದಾಗಿ ಹೇಳಿದರು.

## ಎಸ್‌ಪಿ ಕಚೇರಿ ಮುಂದೆಯೇ ಬೆಂಕಿ ಹಚ್ಚಿಕೊಂಡ ವ್ಯಕ್ತಿ



ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯ ಹೊರಗೆ ವ್ಯಕ್ತಿಯೊಬ್ಬರು ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡ ದುರ್ಘಟನೆ ಉತ್ತರ ಪ್ರದೇಶದ ಉನ್ನಾವೊದಲ್ಲಿ ನಡೆದಿದೆ.

ತಾನು ದಾಖಲಿಸಿದ ಪ್ರಕರಣದಲ್ಲಿ ವಿಳಂಬ ಪ್ರಗತಿಯಿಂದ ಅಸಮಾಧಾನಗೊಂಡ ಚಂದ್ರ ಪಾಸಿ ಅವರು ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದು, ಸದ್ಯ ಅವರು ಗಂಭೀರ ಸುಟ್ಟ ಗಾಯಗಳಿಂದ ಉನ್ನಾವೋ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ತನ್ನ ನೆರೆಹೊರೆಯವರ ವಿರುದ್ಧ ಪಾಸಿ, ಎಸ್‌ಸಿ/ಎಸ್‌ಟಿ ಕಾಯ್ದೆ ಮತ್ತು ಹಿಂಸಾಚಾರ, ದಾಳಿಗಳು ಮತ್ತು ಜಾತಿ ನಿಂದನೆಗಳ ಬಳಕೆಗೆ ಸಂಬಂಧಿಸಿದ ಇತರ ಸೆಕ್ಷನ್‌ಗಳ ಅಡಿಯಲ್ಲಿ ಅಕ್ಟೋಬರ್ 18 ರಂದು ಎಫ್‌ಐಆರ್ ದಾಖಲಿಸಿದ್ದಾರೆ.

ಅವರು ತಮ್ಮ ದೂರಿನಲ್ಲಿ ಮುನೀರ್, ಸಬೀರ್, ಅನೀಸ್, ಮುಮ್ತಾಜ್ ಮತ್ತು ಸಬಿಹಾ ಅವರ ಹೆಸರನ್ನು ಉಲ್ಲೇಖಿಸಿದ್ದಾರೆ. ಇನ್ನೂ ಈ ಪ್ರಕರಣದಿಂದ ಇಬ್ಬರು ವ್ಯಕ್ತಿಗಳನ್ನು ಕೈಬಿಡಲಾಗಿದೆ.

ಪೊಲೀಸರ ಈ ನಡೆ ಪಾಸಿಯನ್ನು ಕೆರಳಿಸಿತು. ಹೀಗಾಗಿ ಅವರು ಕಂಬಳಿಯನ್ನು ಸುತ್ತಿಕೊಂಡು ಎಸ್ಪಿ ಕಚೇರಿಗೆ ಬಂದು ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು, ಬಳಿಕ ಪೊಲೀಸರು ಸಾಕ್ಷ್ಯವನ್ನು ತಿರುಚುತ್ತಿರುವ ಬಗ್ಗೆ ಕಿರುಚಿಕೊಂಡಿದ್ದಾನೆ ಎಂದು ವರದಿಯಿಂದ ತಿಳಿದುಬಂದಿದೆ.

ಇನ್ನು ಘಟನೆಯ ಬಗ್ಗೆ ಮಾಹಿತಿ ಪಡೆದ ಜಿಲ್ಲಾ ಮ್ಯಾಜಿಸ್ಟ್ರೇಟ್ ಅಪೂರ್ವ ದುಬೆ ಮತ್ತು ಇತರ ಅಧಿಕಾರಿಗಳು ಆಸ್ಪತ್ರೆಗೆ ಆಗಮಿಸಿ ದೂರುದಾರರನ್ನು ಭೇಟಿ ಮಾಡಿದರು ಎಂದು ವರದಿಯಾಗಿದೆ.

## ಕಾಂಗ್ರೆಸ್ 139ನೇ ಸಂಸ್ಥಾಪನಾ ದಿನಾಚರಣೆ

ಬೆಳಗಾವಿ: ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ 139ನೇ ಸಂಸ್ಥಾಪನಾ ದಿನಾಚರಣೆ ಹಿನ್ನೆಲೆಯಲ್ಲಿ ನಗರದ ಕಾಂಗ್ರೆಸ್ ಭವನದಲ್ಲಿ ಮಹಾತ್ಮ ಗಾಂಧೀಜಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾಂಗ್ರೆಸ್ ಪಕ್ಷದ 139ನೇ ಸಂಸ್ಥಾಪನಾ ದಿನಾಚರಣೆ ಆಚರಿಸಲಾಯಿತು.

ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ ಮಾತನಾಡಿ, ಭಾರತದ ಇತಿಹಾಸ ಕಂಡ ಪ್ರಮುಖ ರಾಜಕೀಯ ಪಕ್ಷ ಕಾಂಗ್ರೆಸ್. ಜನಪರತೆಯ ಆಧಾರದ ಮೇಲೆ ಎಲ್ಲ ವರ್ಗಗಳ ಏಳಿಗೆಗಾಗಿ ಶ್ರಮಿಸುತ್ತಿದ್ದು, ಸಮಾನ ಅವಕಾಶಗಳನ್ನು ಸೃಷ್ಟಿಸಿದ ಕಾಂಗ್ರೆಸ್‌ನ 139ನೇ ಸಂಸ್ಥಾಪನಾ ದಿನಾಚರಣೆ ಆಚರಿಸುತ್ತಿದ್ದೇವೆ ಎಂದು ತಿಳಿಸಿದರು.

ಇದೇ ವೇಳೆ ಬೆಳಗಾವಿ ಗ್ರಾಮೀಣ ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ ಧ್ವಜಾರೋಹಣ ನೆರವೇರಿಸಿದರು. ಜಿಲ್ಲಾ ಕಾಂಗ್ರೆಸ್ ಸೇವಾದಳದ ವತಿಯಿಂದ ಪ್ರತಿಜ್ಞಾವಿಧಿ ಬೋಧಿಸಲಾಯಿತು.




ಈ ಸಂದರ್ಭದಲ್ಲಿ ಬಸವರಾಜ ಶೇಂಗಾವಿ, ಮೋಹನ್ ರಡ್ಡಿ, ಪ್ರದೀಪ ಎಂ.ಜೆ., ಶೇಖರ ಐಟಿ, ಸೇವಾದಳದ ಪ್ರಮುಖರಾದ ಶಕೀಲ್ ಮುಲ್ಲಾ, ವಿನೋದ ಸೊಲ್ಲಾಪುರೆ, ರಾಜು ಶಿಂಫೆ, ಅನ್ನಪೂರ್ಣ ಅಸೂರಕರ, ಕೆಪಿಸಿಸಿ ಸದಸ್ಯೆ ಆಯಿಶಾ ಸನದಿ, ಜಯಶ್ರೀ ಮಾಳಗಿ, ವಿಜಯ ಗೆಜ್ಜಿ, ಅಕ್ಬರ್ ತಪಕಿರ್, ಇಮ್ರಾನ್ ತಪಕಿರ್, ಗಿರೀಶ್ ಪಾಟೀಲ್, ಅಬ್ದುಲ್ ಮುಲ್ಲಾ ಸೇರಿದಂತೆ ಇತರರು ಇದ್ದರು.

## ಪ್ರವಾಸಕ್ಕೆ ಹೋದ ವೇಳೆ ವಿದ್ಯಾರ್ಥಿಯೊಂದಿಗೆ ಶಿಕ್ಷಕಿಯ ಅಸಭ್ಯ ವರ್ತನೆ

ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲೂಕಿನ ಮುರಗಮಲ್ಲ ಸರ್ಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸಕ್ಕೆ ಹೋಗಿದ್ದ ವೇಳೆ ಮುಖ್ಯ ಶಿಕ್ಷಕಿಯೊಬ್ಬರು ಅಪ್ರಾಪ್ತ ವಿದ್ಯಾರ್ಥಿಯೊಂದಿಗೆ ಅಸಭ್ಯವಾಗಿ ವರ್ತಿಸಿದ್ದಾರೆ.


ಸಾಲದೆಂಬಂತೆ ಆತನೊಂದಿಗೆ ರೊಮ್ಯಾಂಟಿಕ್ ಆಗಿ ವಿಡಿಯೋ ಹಾಗೂ ಫೋಟೋ ತನ್ನ ಮೊಬೈಲ್‌ನಲ್ಲಿ ಸೆರೆ ಹಿಡಿದಿರುವ ಘಟನೆ ನಡೆದಿದೆ.

ಶಾಲೆಯ ಮುಖ್ಯ ಶಿಕ್ಷಕಿ ಪುಷ್ಪಲತಾ, ತಾನೂ ಯಾವ ಸ್ಥಾನಮಾನದಲ್ಲಿದ್ದೀನಿ ಎಂಬುದನ್ನು ಮರೆತು ವಿದ್ಯಾರ್ಥಿಯೊಂದಿಗೆ ಅಸಭ್ಯವಾಗಿ ವರ್ತಿಸಿದ್ದಾಳೆ.

ಮುಖ್ಯ ಶಿಕ್ಷಕಿ ಶಾಲೆಯಿಂದ ಶೈಕ್ಷಣಿಕ ಪ್ರವಾಸಕ್ಕೆ ತೆರಳಿದ್ದ ವೇಳೆ ಶಾಲಾ ಬಾಲಕನೊಂದಿಗೆ ಈ ರೀತಿ ವರ್ತಿಸಿದ್ದು, ಇದೀಗ ಆ ಫೋಟೋಗಳು ಸೋರಿಕೆ ಆಗಿವೆ.

ಶಿಕ್ಷಕಿಯೂ ಬಾಲಕನೊಂದಿಗೆ ವಿವಿಧ ಭಂಗಿಗಳಲ್ಲಿ ಫೋಟೋ ತೆಗೆಸಿಕೊಂಡಿದ್ದು, ವಿದ್ಯಾರ್ಥಿ ಕೂಡ ಶಿಕ್ಷಕಿಯರನ್ನು ಮುದ್ದಾಡಿದ್ದು, ಶಿಕ್ಷಕಿ ಕೂಡ ಬಾಲಕನಿಗೆ ಕಿಸ್ ಕೊಟ್ಟಿರುವ ಫೋಟೋಗಳು ಈಗ ಎಲ್ಲೆಡೆ ವೈರಲ್ ಆಗಿದೆ.

ವಿಷಯ ತಿಳಿಯುತ್ತಿದ್ದಂತೆ ವಿದ್ಯಾರ್ಥಿ ಪೋಷಕರು ಕೂಡ ಶಾಲೆ ಬಳಿ ತೆರಳಿ ಶಿಕ್ಷಕಿ ವಿರುದ್ಧ ಆಕ್ರೋಶಕ್ಕೆ ವ್ಯಕ್ತಪಡಿಸಿದ್ದಾರೆ.



ಇನ್ನೂ ಘಟನೆಯ ಬಗ್ಗೆ ಶಾಲೆ ಪೋಷಕರು ಕ್ಷೇತ್ರ ಶಿಕ್ಷಣಾಧಿಕಾರಿ ಗಮನಕ್ಕೆ ತಂದಿದ್ದಾರೆ.

## ಹೊಸ ವರ್ಷಾಚರಣೆಗೆ ಡ್ರಗ್ಸ್ ಪೂರೈಸಲು ಮುಂದಾಗಿದ್ದ ನಾಲ್ವರು ಪೊಲೀಸ್ ವಶ

ಬೆಂಗಳೂರು: ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಬೆಂಗಳೂರು ಮತ್ತು ಸುತ್ತಮುತ್ತ ಅಕ್ರಮ ಚಟುವಟಿಕೆಗಳ ಮೇಲೆ ನಿಗಾ ಇಡಲು ಪೊಲೀಸರು ಹಲವು ಕ್ರಮಗಳನ್ನು ಕೈಗೊಂಡಿದ್ದಾರೆ.

ಖಚಿತ ಮಾಹಿತಿ ಮೇರೆಗೆ ನೆಲಮಂಗಲ ಪೊಲೀಸರು ಮನೆಯೊಂದರ ಮೇಲೆ ದಾಳಿ ನಡೆಸಿ ನಾಲ್ವರು ಡ್ರಗ್ಸ್ ಪೆಡ್ಲರ್ಗಳನ್ನು ಬಂಧಿಸಿದ್ದಾರೆ. ಆರೋಪಿಗಳು ಡಿ.31ರಂದು ವಿವಿಧೆಡೆ ಡ್ರಗ್ಸ್ ಸರಬರಾಜು ಮಾಡಲು ಅಪಾರ ಪ್ರಮಾಣದ ಆರ್ಡರ್ ಪಡೆದಿದ್ದರು. ಬಂಧಿತರನ್ನು ಗಂಗೊಂಡನಹಳ್ಳಿ ಅನಿಲ್ (21), ಅಂದ್ರಹಳ್ಳಿ ಕಾರ್ತಿಕ್ (18), ನವೀನ್ (20) ಮತ್ತು ದೊಂಬರಹಳ್ಳಿ ಮಂಜುನಾಥ್ (19) ಎಂದು ಗುರುತಿಸಲಾಗಿದೆ.



ಆರೋಪಿಗಳಿಂದ 2 ಕೆಜಿ ಗಾಂಜಾ, ಎರಡು ಬೈಕ್ ಹಾಗೂ ಚಾಕುಗಳನ್ನು ನೆಲಮಂಗಲ ಗ್ರಾಮಾಂತರ ಪೊಲೀಸರು ವಶಪಡಿಸಿಕೊಂಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಪೊಲೀಸರು ಆ ಪ್ರದೇಶದ ಮನೆ ಮೇಲೆ ದಾಳಿ ನಡೆಸಿದಾಗ ನಿಷೇಧಿತ ಡ್ರಗ್ಸ್ ಪತ್ತೆಯಾಗಿವೆ.

ನಾಲ್ವರು ಆರೋಪಿಗಳು ಹೊಸ ವರ್ಷದ ಮುನ್ನಾದಿನದಂದು ಗ್ರಾಹಕರಿಗೆ ಡ್ರಗ್ಸ್ ಸರಬರಾಜು ಮಾಡಲು ಭಾರಿ ಮೊತ್ತದ ಆರ್ಡರ್ ತೆಗೆದುಕೊಂಡಿರುವುದು ಆರಂಭಿಕ ವಿಚಾರಣೆಯಲ್ಲಿ ಪೊಲೀಸರಿಗೆ ಗೊತ್ತಾಗಿದೆ. ಆರೋಪಿಗಳು ಹೋಟೆಲ್‌ಗಳು, ಢಾಬಾಗಳು, ಲಾಡ್ಜ್‌ಗಳು ಮತ್ತು ಟ್ರಕ್ ಪಾರ್ಕಿಂಗ್ ಪ್ರದೇಶಗಳಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಬಂಧಿತರು ಬೈಕ್ ವ್ಹೀಲಿಂಗ್, ದರೋಡೆ ಮುಂತಾದ ಹಲವು ಪ್ರಕರಣಗಳಲ್ಲಿ ಶಾಮೀಲಾಗಿದ್ದರು.

ಆರೋಪಿಗಳ ಜಾಲ ಮತ್ತು ಮಾದಕವಸ್ತು ಸಂಗ್ರಹದ ಮೂಲವನ್ನು ಗುರುತಿಸಲು ಪೊಲೀಸರು ಆರೋಪಿಗಳ ಮೊಬೈಲ್‌ಗಳನ್ನು ಪರಿಶೀಲಿಸುತ್ತಿದ್ದಾರೆ.

ಶೀಘ್ರ ಹಣ ಗಳಿಸಲು ಹಾಗೂ ಐಷಾರಾಮಿ ಜೀವನ ನಡೆಸಲು ಮಾದಕ ವಸ್ತು ಮಾರಾಟ ಮಾಡುತ್ತಿದ್ದರು ಎಂದು ಆರೋಪಿಗಳು ವಿಚಾರಣೆ ವೇಳೆ ತಿಳಿಸಿದ್ದಾರೆ. ಈ ತಿಂಗಳ ಆರಂಭದಲ್ಲಿ ಬೆಂಗಳೂರು ಪೊಲೀಸರು ವ್ಯಾಪಾರಿ ವೀಸಾದ ಮೇಲೆ ದೇಶಕ್ಕೆ ಬಂದಿದ್ದ ಆಫ್ರಿಕನ್ ಪ್ರಜೆಯೊಬ್ಬರಿಂದ ಭಾರಿ ಪ್ರಮಾಣದ ಡ್ರಗ್ಸ್ ವಶಪಡಿಸಿಕೊಂಡಿದ್ದರು.

## ಕನ್ನಡಕ್ಕಾಗಿ ಹೋರಾಡಿದ ಟಿ.ಎ ನಾರಾಯಣಗೌಡರನ್ನು ಬಿಡುಗಡೆ ಮಾಡುವಂತೆ ಅಗ್ರಹ ಕರವೇ ಯುವ ಸೇನೆ ಬಾಳಪ್ಪ ಗುಡಗೆನಟ್ಟಿ



ಬೆಳಗಾವಿ: ಕನ್ನಡ ಉಳಿವಿಗಾಗಿ ಹೋರಾಡುತ್ತಿರುವ ನನ್ನ ಯಲ್ಲ ಕನ್ನಡ ಅಬಿಮಾನಿಗಳೆ ಎದ್ದೇಳಿ.

ಅವರು ನಾಳೆ ನಮ್ಮೆಲ್ಲರ ಧ್ವನಿಯನ್ನು ಅಡಗಿಸುವ ಕೆಲಸವಾಗುತ್ತಿದೆ ನಾವೆಲ್ಲ ನಿಮ್ಮ ಜೊತೆಯಲ್ಲಿ ಎಂದೆಂದಿಗೂ ನಮ್ಮ ಬೆಂಬಲ ನಿಮ್ಮ ಜೊತೆಯಲ್ಲಿ ಇರುತ್ತೇವೆ.

ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಹಾಗೂ ಸನ್ಮಾನ್ಯ ಟಿ.ಎ ನಾರಾಯಣಗೌಡರು ಹೋರಾಟ ಮಾಡಿದ್ದು ಕನ್ನಡ ಭಾಷೆ ಕನ್ನಡ ನೆಲ ಈ ನಾಡಿನ ಭಾಷೆಯ ಉಳಿವಿಗಾಗಿ ಭಾಷೆಯ ಪರ ಧ್ವನಿ ಎತ್ತುವ ನಮ್ಮೆಲ್ಲರ ಧ್ವನಿಯನ್ನು ಅಡಗಿಸುವ ಕೆಲಸ ಮಾಡುತ್ತಿರುವ ಕೆಲವು ರಾಜಕೀಯ ವ್ಯಕ್ತಿಗಳು.

ಎಚ್ಚರವಾಗಿರಿ ಇನ್ನು ಮುಂದೆ ಟಿಎ ನಾರಾಯಣಗೌಡರು ಸೇರಿದಂತೆ ಬಂಧಿಸಿರುವ ಅಷ್ಟು ಕಾರ್ಯಕರ್ತರ ಬಿಡುಗಡೆ ಮಾಡಬೇಕಾಗಿ ಒತ್ತಾಯ ಕರ್ನಾಟಕ ರಕ್ಷಣಾ ವೇದಿಕೆ ಯುವ ಸೇನೆಯ ಪರವಾಗಿ ರಾಜ್ಯದ ಕನ್ನಡಿಗರ ಪರವಾಗಿ ಬಿಡುಗಡೆ ಮಾಡಿ ಹಾಕಿರುವ ಕೇಸುಗಳನ್ನು ಹಿಂಪಡೆಯುಬೇಕೆಂದು ಒತ್ತಾಯ ಮಾಡುತ್ತೇನೆ.

ಈ ಸಂದರ್ಭದಲ್ಲಿ ಎಲ್ಲಾ ಕನ್ನಡಪರ ಸಂಘಟನೆಗಳು ನಾಯಕರುಗಳು ಪ್ರತಿಷ್ಠೆ ಬಿಟ್ಟು ಒಗ್ಗಟ್ಟು ಪ್ರದರ್ಶನ ಮಾಡಬೇಕು. ಅನ್ನುವಿದೆ ನನ್ನ ಕನ್ನಡದ ಈ ಧ್ವನಿ ಇಂದು ನಾರಾಯಣಗೌಡರು ನಾಳೆ ನೀವು ನಾನು ಹಾಗೂ ಇನ್ನೂ ಇಡೀ ಕನ್ನಡ ಸಮೂಹವನ್ನು ಬಾಯಿ ಮುಚ್ಚಿಸುತ್ತಾರೆ ನೆನಪಿರಲಿ. ಎಚ್ಚರ ಎದ್ದೇಳಿ ಕನ್ನಡಿಗರೇ...

ಈ ವಿಷಯವನ್ನು ನಾರಾಯಣಗೌಡರು ಕನ್ನಡ ನಾಮಫಲಕಗಳಿಗೆ ಅವಕಾಶ ನೀಡಬೇಕು ಇಂಗ್ಲಿಷ್ ತೆಗೆದು ಹಾಕಬೇಕು ಕರ್ನಾಟಕದಲ್ಲಿ ಕನ್ನಡವೇ ಸರ್ವಭೌಮ ಕನ್ನಡವೇ ನಾಮಫಲಕಗಳಲ್ಲಿ ಅಳವಡಿಸಬೇಕು ಅಂದುಕೊಂಡು ಹೋರಾಟ ಮಾಡಿದ್ದಾರೆ.

ಹೊರತು ತನ್ನ ವೈಯಕ್ತಿಕ ವಿಚಾರವೂ ಕೂಡಾ ಏನೂ ಇಲ್ಲಾ ಅಂದಮೇಲೆ ಸರಕಾರ ನಾರಾಯಣಗೌಡರನ್ನು ಬಂಧಿಸಿರುವ ವಿಷಯವನ್ನು ಗಂಭೀರ ವಿಷಯವಾಗಿ ತೆಗೆದುಕೊಂಡು ಕನ್ನಡ ಮನಸುಗಳಿಗೆ ಯಾವುದೇ ರೀತಿಯ ಅನ್ಯಾಯ ಆಗದಂತೆ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ನನ್ನ ಅಗ್ರಹ

ಜೈ ಕರ್ನಾಟಕ....ಜೈ ಕನ್ನಡಾಂಬೆ ಕರ್ನಾಟಕದಲ್ಲಿ ಕನ್ನಡವೇ ಸರ್ವಭೌಮ ಆಗಲೇಬೇಕು ಕನ್ನಡ ನಾಮಫಲಕಗಳು ಕರ್ನಾಟಕದಲ್ಲಿ ಪ್ರತಿ ಜಿಲ್ಲೆಯಲ್ಲಿ ಕೂಡಾ ಕನ್ನಡದಲ್ಲಿ ನಾಮಫಲಕಗಳನ್ನು ಅಳವಡಿಸಬೇಕು ಕರ್ನಾಟಕ ರಕ್ಷಣಾ ವೇದಿಕೆ ಯವ ಸೇನೆ ಬೆಳಗಾವಿ ಜಿಲ್ಲಾ ಘಟಕ ಜಿಲ್ಲಾಧ್ಯಕ್ಷರು ಬಾಳಪ್ಪಾ ಗುಡಗೇನಟ್ಟಿ ಹಾಗೂ ಪದಾಧಿಕಾರಿಗಳು ಇದ್ದರು.

# ಸ್ವಸ್ಥ್ಯ ಸಮಾಜ ನಿರ್ಮಿಸಲು ಯುವಕರು ಮುಂದಾಗಲಿ: ರುದ್ರೇಶ ಎಸ್.ಎನ್

ಬಳ್ಳಾರಿ: ದೇಶದ ಯುವಕರು ಸಮಾಜದ ಸ್ವಾಸ್ಥ್ಯ ಕಾಪಾಡಲು ಸ್ವಯಂ ಪ್ರೇರಿತರಾಗಿ ಮುಂದಾಗಬೇಕು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವರಾದ ರುದ್ರೇಶ ಎಸ್. ಎನ್ ಅವರು ಹೇಳಿದರು.

ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ ಹಾಗೂ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ರಾಷ್ಟೀಯ ಸೇವಾ ಯೋಜನಾ ಕೋಶ ಇವರ ಸಂಯುಕ್ತಾಶ್ರಯದಲ್ಲಿ ನಗರದ ಹೊರವಲಯದಲ್ಲಿನ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ "ಹೆಚ್.ಐ.ವಿ/ ಏಡ್ಸ್, ಟಿ.ಬಿ., ಆರ್‌ಆರ್ಸಿ ಗುರಿ ಉದ್ದೇಶ ಮತ್ತು ರಕ್ತದಾನ" ಕುರಿತಾದ ವಿಶ್ವವಿದ್ಯಾಲಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಾಧಿಕಾರಿಗಳಿಗೆ ಗುರುವಾರ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸದೃಢ ಸಮಾಜ ನಿರ್ಮಿಸುವಲ್ಲಿ ಯುವಕರ ಪಾತ್ರ ಬಹುಮುಖ್ಯವಾಗಿದೆ.




ಯುವಕರು ದುಶ್ಚಟಗಳಿಗೆ ಒಳಗಾಗದೆ ದೇಹ ಮತ್ತು ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

ಪ್ರಾಧ್ಯಾಪಕರು ಕಾರ್ಯಾಗಾರದಲ್ಲಿ ಪಡೆದಂತಹ ಮಾಹಿತಿಯನ್ನು ಸಮಾಜದ ಒಳಿತಿಗಾಗಿ ಬಳಸಬೇಕು ಎಂದು ಸಲಹೆ ನೀಡಿದರು.

ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ.ಡಾ.ಅನಂತ ಎಲ್. ಝುಂಡೆಕರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಆರೋಗ್ಯ ಇಲಾಖೆಯು ಹೆಚ್‌ಐವಿ ಏಡ್ಸ್ ನಿಯಂತ್ರಣ ಜಾಗೃತಿ ಮೂಡಿಸಲು ಶ್ರಮಿಸುತ್ತಿದೆ. ಏಡ್ಸ್ ಕುರಿತಾಗಿ ಜನರಲ್ಲಿರುವ ತಪ್ಪು ಮಾಹಿತಿಯನ್ನು ಹೋಗಲಾಡಿಸಲು ವಿವಿಧ ಕಾರ್ಯಕ್ರಮಗಳ ಮೂಲಕ ಪ್ರಯತ್ನಿಸುತ್ತಿದ್ದು, ಇಂತಹ ಮಾರಕ ರೋಗಗಳ ಕುರಿತು ಅಧ್ಯಾಪಕರುಗಳು ಯುವಕರಿಗೆ ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು.

ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಮೇಲ್ವಿಚಾರಕ ಗಿರೀಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಮಾಜಿ ಪ್ರಭಾರ ಕುಲಪತಿಗಳಾದ ಪ್ರೊ. ಸಾಹೇಬ್ ಅಲಿ ಹೆಚ್.ನಿರಗುಡಿ, ರಾಷ್ಟ್ರೀಯ ಸೇವಾಯೋಜನೆ ಸಂಯೋಜನಾಧಿಕಾರಿ ಡಾ.ಕುಮಾರ ಸೇರಿದಂತೆ ವಿವಿಧ ವಿಭಾಗಗಳ ಡೀನರು, ಮುಖ್ಯಸ್ಥರು ಹಾಗೂ ವವಿಶ್ವವಿದ್ಯಾಲಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಮಹಾವಿದ್ಯಾಲಯಗಳ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿಗಳು, ಮತ್ತಿತರರು ಉಪಸ್ಥಿತರಿದ್ದರು.

## ಡಿ.30 ರಂದು ಜಿಲ್ಲಾಧಿಕಾರಿಗಳಿಂದ ಧಾರವಾಡದಲ್ಲಿ ತಾಲೂಕ ಮಟ್ಟದ ಜನತಾ ದರ್ಶನ



ಧಾರವಾಡ: ಸರ್ಕಾರದ ನಿರ್ದೇಶನದಂತೆ ತಾಲೂಕಾ ಮಟ್ಟದ ಜನತಾ ದರ್ಶನವನ್ನು ಧಾರವಾಡ ತಹಶೀಲ್ದಾರ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳು ಡಿಸೆಂಬರ 30 ರಂದು ಬೆಳಿಗ್ಗೆ 9 ಗಂಟೆಗೆ ಹಮ್ಮಿಕೊಂಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅಪರ ಜಿಲ್ಲಾಧಿಕಾರಿಗಳು, ಧಾರವಾಡ ತಾಲೂಕಿನ ಸಾರ್ವಜನಿಕರು ತಮ್ಮ ಅಹವಾಲು, ಮನವಿ, ಸಮಸ್ಯೆಗಳಿದಲ್ಲಿ ಡಿ. 30 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯೋಜಿಸಿರುವ ಜನತಾ ದರ್ಶನದಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಮೃತ ವ್ಯಕ್ತಿಯ ವಾರಸುದಾರರ ಪತ್ತೆಗಾಗಿ ಮನವಿ

ಬಳ್ಳಾರಿ: ನಗರದ ಕೆ.ಎಸ್.ಆರ್ಟಿ.ಸಿ ಬಸ್ ನಿಲ್ದಾಣದಲ್ಲಿ ಸುಮಾರು 45ರಿಂದ 50 ವರ್ಷದ ಅನಾಮಧೇಯ ವ್ಯಕ್ತಿಯು ಡಿ.22 ರಂದು ಮೃತಪಟ್ಟ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಮೃತದೇಹವನ್ನು ವಿಮ್ಸ್ನ ಶೀಥಲೀಕೃತ ಶವಗಾರ ಕೋಣೆಯಲ್ಲಿರಿಸಲಾಗಿದೆ. ವಾರಸುದಾರರು ತಿಳಿದಿರುವುದಿಲ್ಲ.

ಚಹರೆ ಗುರುತು: ಎತ್ತರ ಸುಮಾರು 5.5 ಅಡಿ, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲುಮುಖ, ತಲೆಯಲ್ಲಿ ಒಂದೂವರೆ ಇಂಚಿನ ಬಿಳಿ ಮಿಶ್ರಿತ ಕಪ್ಪು ಕೂದಲು, ಬಿಳಿ ಮಿಶ್ರಿತ ಕಪ್ಪು ಮೀಸೆ ಮತ್ತು ಗಡ್ಡ ಇದ್ದು, ಎಡ ಮೊಣಕೈವರೆಗೆ ಕೈ ಇರುವುದಿಲ್ಲ. ಬಿಳಿ ಬಣ್ಣದ ಮಾಸಿದ ತುಂಬು ತೋಳಿನ ಅಂಗಿ, ನೀಲಿ ಬಣ್ಣದ ಬನಿಯನ್, ನೀಲಿ ಬಣ್ಣದ ಚೌಕಳಿಯ ಲುಂಗಿ ಧರಿಸಿರುತ್ತಾನೆ.

ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್ಪೇಟೆ ಪೊಲೀಸ್ ಠಾಣೆಯ ದೂ.08392-272022, ಪಿ.ಎಸ್.ಐ ಮೊ.9480803081, ಪಿ.ಐ ಮೊ.9480803045 ಹಾಗೂ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಬ್ರೂಸ್ಪೇಟೆ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಸಬ್‌ಇನ್ಸ್ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ-ಶ್ರಮ್ ಪೋರ್ಟಲ್ : ಅಸಂಘಟಿತ ಕಾರ್ಮಿಕರು ನೋಂದಣಿಗೆ ಅವಕಾಶ

ಧಾರವಾಡ: ಕೇಂದ್ರ ಸರ್ಕಾರ ಅಭಿವೃದ್ಧಿಪಡಿಸಿರುವ ಇ-ಶ್ರಮ್ ಪೋರ್ಟಲ್ನಲ್ಲಿ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ನೋಂದಾಯಿಸಲು ಅವಕಾಶವನ್ನು ಕಲ್ಪಿಸಲಾಗಿದೆ. ಆದ್ದರಿಂದ ಜಿಲ್ಲೆಯ ಅಸಂಘಟಿತ ಕೈಮಗ್ಗ ಹಾಗೂ ವಿದ್ಯುತ್ಮಗ್ಗ ನೇಕಾರರು, ನೇಕಾರ ಕಾರ್ಮಿಕರು ನೋಂದಾಯಿಸಿಕೊಳ್ಳುವಂತೆ ಕೋರಲಾಗಿದೆ.

ಸಾಮಾನ್ಯ ಸೇವಾ ಕೇಂದ್ರ ಅಥವಾ ಆ್ಯಪ ಮೂಲಕ ಸ್ವಯಂ ನೋಂದಾಯಿಸಿಕೊಳ್ಳುವಂತೆ ತಿಳಿಸಲಾಗಿದೆ.

ನೋಂದಾಯಿಸಿದ ಅಭ್ಯರ್ಥಿಗಳಿಗೆ ತಕ್ಷಣ ಸ್ಥಳದಲ್ಲೆ ಗುರುತಿನ ಚೀಟಿ ನೀಡುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.0836-2448834 ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.30 ರಂದು ರಂಗಾಯಣದಲ್ಲಿ ವಾರಾಂತ್ಯ ನಾಟಕ ಪ್ರದರ್ಶನ

ಧಾರವಾಡ: ಧಾರವಾಡ ರಂಗಾಯಣದಿಂದ ಡಿ.30 ರಂದು ಸಂಜೆ 6:30 ಗಂಟೆಗೆ ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ ವಾರಾಂತ್ಯ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ.

ಕನ್ನಡ ಸಾಹಿತ್ಯ ಪರಿಷತ್ತ ಜಿಲ್ಲ ಅಧ್ಯಕ್ಷ ಡಾ.ಲಿಂಗರಾಜ ಅಂಗಡಿ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಲಿದ್ದಾರೆ. ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅಧ್ಯಕ್ಷತೆವಹಿಸಲಿದ್ದಾರೆ.

ಕುಂದಗೋಳ ತಾಲೂಕಿನ ಹಿರೇಹರಕುಣಿ ಶ್ರೀ ಬಸವೇಶ್ವರ ದೊಡ್ಡಾಟ ಮೇಳದಿಂದ ದೊಡ್ಡಾಟ ಪ್ರಸಂಗ ; ವಾಲಿ-ಸುಗ್ರೀವ ಕಾಳಗ ಪ್ರದರ್ಶನಗೊಳ್ಳಲಿದೆ ಎಂದು ರಂಗಾಯಣ ಆಡಳಿತಾಧಿಕಾರಿ ಶಶಿಕಲಾ ಹುಡೇದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಿಗ್ ಕಾರ್ಮಿಕರಿಗೆ ವಿಮಾ ಯೋಜನೆ

ಶಿವಮೊಗ್ಗ: ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಫುಡ್ ಡೆಲಿವರಿ ಮಾಡುವ ಹಾಗೂ ಇ-ಕಾಮರ್ಸ್ ಸಂಸ್ಥೆಗಳಾದ ಅಮೇಜಾನ್, ಫ್ಲಿಪ್ಕಾರ್ಟ, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೊ ಬಿಗ್ ಬಾಸ್ಕೆಟ್, ಡೊಮಿನೊಸ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿರುವ ಗಿಗ್ ಕಾರ್ಮಿಕರಿಗೆ ದೇಶದಲ್ಲಿಯೇ ಮೊದಲ ಬಾರಿಗೆ ವಿಮಾ ಯೋಜನೆ ಜಾರಿಯಾಗಿದೆ.

ಎಲ್ಲಾ ಅರ್ಹ ಅಸಂಘಟಿತ ಗಿಗ್ ಕಾರ್ಮಿಕರಿಗೆ ಸೇವಾ ಸಿಂಧು ಪೋರ್ಟಲ್ನಲ್ಲಿ ನೋಂದಾಯಿಸಬಹುದಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ತಿಳಿಸಿದ್ದಾರೆ.

ವಿಮಾ ಸೌಲಭ್ಯವು ಕರ್ತವ್ಯದಲ್ಲಿರುವಾಗ, ಇಲ್ಲದಿರುವಾಗ ಸಂಭವಿಸುವ ಅಪಘಾತಗಳಿಗೂ ಅನ್ವಯವಾಗಲಿದ್ದು, ಯೋಜನೆ ಸಂಪೂರ್ಣ ಉಚಿತ, ಯಾವುದೇ ರೀತಿಯ ಪ್ರೀಮಿಯಂ ಪಾವತಿಸುವ ಅಗತ್ಯ ಇರುವುದಿಲ್ಲ. ಅಪಘಾತದಲ್ಲಿ ಮರಣ ಹೊಂದಿದ್ದಲ್ಲಿ ವಿಮಾ ಪರಿಹಾರ 2 ಲಕ್ಷ ರೂ. ಹಾಗೂ ಜೀವ ವಿಮಾ 2 ಲಕ್ಷ ರೂ. ಸೇರಿ ಒಟ್ಟು 4 ಲಕ್ಷ ರೂ, ಅಪಘಾತದಿಂದ ಶಾಶ್ವತ ದುರ್ಬಲ ಹೊಂದಿದ್ದಲ್ಲಿ 2 ಲಕ್ಷ ರೂ ವರೆಗೆ ಸೌಲಭ್ಯ, ಆಸ್ಪತ್ರೆ ವೆಚ್ಚ ಮರುಪಾವತಿ ಒಂದು ಲಕ್ಷ ರೂ. ವರೆಗೆ ಸೌಲಭ್ಯಗಳು ಇರುತ್ತದೆ.

18 ರಿಂದ 60 ವರ್ಷದೊಳಗಿನ ಗಿಗ್ ಕಾರ್ಮಿಕರು ಸೇವಾಸಿಂಧು ಪೇರ್ಟಲ್ ಮೂಲಕ ತಮ್ಮ ಹೆಸರು ನೋಂದಾಯಿಸಬೇಕು.

ಆದಾಯ ತೆರಿಗೆ ಪಾವತಿದಾರರಾಗಿರಬಾರದು,

ಭವಿಷ್ಯನಿಧಿ ಹಾಗೂ ಇಎಸ್‌ಐ ಫಲಾನುಭವಿಯಾಗಿರಬಾರದು ಹಾಗೂ ಕರ್ನಾಟಕದಲ್ಲಿ ಡೆಲಿವರಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಮಾತ್ರ ಅನ್ವಯಿಸುತ್ತದೆ.

ಆಧಾರ್ ಸಂಖ್ಯೆ, ವೃತ್ತಿ ನಿರ್ವಹಿಸುತ್ತಿರುವ ಸಂಸ್ಥೆಗಳು ವಿತರಿಸಿದ ಗುರುತಿನ ಚೀಟಿ, ವೇತನ ಚೀಟಿ, ವೇತನ ಪಡೆದ ಬ್ಯಾಂಕ್ ಪಾಸ್ಬುಕ್ ಹಾಗೂ ಇ-ಶ್ರಮ್ ಕಾರ್ಡ್ ಈ ಎಲ್ಲಾ ದಾಖಲಾತಿಗಳನ್ನು ಹೊಂದಿರಬೇಕು.

ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಕಾರ್ಮಿಕ ನಿರೀಕ್ಷಕರುಗಳ ಕಚೇರಿಯ ಕಾರ್ಮಿಕ ಅಧಿಕಾರಿ ದೂ.ಸಂ. 08182-248940 ನ್ನು ಸಂಪರ್ಕಿಸಬಹುದು ಹಾಗೂ ಶಿವಮೊಗ್ಗ ಜಿಲ್ಲೆಯ ಕಾರ್ಮಿಕ ಅಧಿಕಾರಿಯವರ ಕಚೇರಿ ಅಥವಾ ಕಾರ್ಮಿಕ ನಿರೀಕ್ಷಕರ ಕಚೇರಿ ಶಿವಮೊಗ್ಗ, ಭದ್ರಾವತಿ, ಸೊರಬ, ಸಾಗರ, ಹೊಸನಗರ, ತೀರ್ಥಹಳ್ಳಿ, ಶಿಕಾರಿಪುರ ಕಚೇರಿಗಳನ್ನು ಸಂಪರ್ಕಿಸಬಹುದೆಂದು ಕಾರ್ಮಿಕ ಅಧಿಕಾರಿ ಸುಮ ಹೆಚ್.ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಟ್ಟಣದ ಅಂಗಡಿ-ಮುಂಗಟ್ಟುಗಳು ಶೇ 60% ರಷ್ಟು ಭಾಗ ಕನ್ನಡ ಭಾಷೆಯಲ್ಲಿ ನಾಮಫಲಕಗಳು ಅಳವಡಿಸಲು ಮನವಿ

ಘಟಪ್ರಭಾ:ಪಟ್ಟಣದಲ್ಲಿ ಕನ್ನಡ ಪರ ಸಂಘಟನೆಗಳ ಒಕ್ಕೂಟ ವತಿಯಿಂದ ಎಲ್ಲ ಅಂಗಡಿ- ಮುಂಗಟ್ಟುಗಳು ಶೇ 60% ರಷ್ಟು ಭಾಗ ಕನ್ನಡ ಭಾಷೆಯಲ್ಲಿ ನಾಮ ಫಲಕಗಳು ಅಳವಡಿಸಬೇಕು ಮತ್ತು ಕನ್ನಡ ಪದಗಳನ್ನು ದಪ್ಪ ಅಕ್ಷರಗಳಲ್ಲಿ ಸ್ಪಷ್ಟವಾಗಿ ಕಾಣುವಂತೆ ಬಳಸಬೇಕೆಂದು ಪುರಸಭೆ ಮುಖ್ಯಾಧಿಕಾರಿ ಎಮ್ ಎಸ್ ಪಾಟೀಲ ಮತ್ತು ಘಟಪ್ರಭಾ ಠಾಣೆಯ ಪಿ.ಎಸ್.ಐ ಎಸ್ ಆರ್ ಕಣವಿ ಅವರಿಗೆ ಮನವಿ ಸಲ್ಲಿಸಲಾಯಿತು.

ಅಂಗಡಿ-ಮುಂಗಟ್ಟುಗಳು, ಹೋಟೆಲ್‌ಗಳು, ವಾಣಿಜ್ಯ ಸಂಕೀರ್ಣಗಳು, ಶಾಪಿಂಗ್ ಮಾಲ್‌ಗಳು ಮತ್ತು ಖಾಸಗಿ



ಕಂಪನಿಗಳಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಶೇ 60% ರಷ್ಟು ಭಾಗ ಕನ್ನಡದಲ್ಲಿರಬೇಕು.

ಸ್ಪಷ್ಟವಾಗಿ ಕಾಣುವಂತೆ ಕನ್ನಡ ಪದಗಳನ್ನು ದಪ್ಪ ಅಕ್ಷರಗಳಲ್ಲಿ ಕಾಣುವಂತೆ ಬಳಸಬೇಕು ಎಂದು ಆದೇಶ ಇದ್ದರು ಕೂಡಾ ಕನ್ನಡ ಭಾಷೆಗೆ ಹೆಚ್ಚಿನ ಮಹತ್ವ ಕೊಡದೇ ಪರ ಭಾಷೆಯ ಬೋರ್ಡ್ ಗಳನ್ನು ಅಳವಡಿಸಿ ನಿಯಮ ಉಲ್ಲಂಘನೆ ಮಾಡುತ್ತಿದ್ದಾರೆ.

ಹಾಗಾಗಿ ಕನ್ನಡದಲ್ಲಿ ಶೇ 60% ರಷ್ಟು ಭಾಗ ನಾಮಫಲಕಗಳನ್ನು ಅಳವಡಿಸಬೇಕು ಎಂದು ಅಧಿಕಾರಿಗಳ ಗಮನಕ್ಕೆ ತರಲಾಯಿತು.ನಾಮಫಲಕ ಬದಲಾವಣೆಗೆ ಒಂದು ವಾರದ ಗಡುವು ನೀಡಲಾಯಿತು ಒಂದು ವೇಳೆ ನಾಮಫಲಕಗಳಲ್ಲಿ ಬದಲಾವಣೆ ಮಾಡದೇ ಇದ್ದಲ್ಲಿ ಕಪ್ಪು ಮಸಿ ಬಳೆದು ಹೋರಾಟ ಮಾಡಲಾಗುವುದು ಎಂದು ಎಚ್ಚರಿಕೆ ಕೊಡಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಪರ ಸಂಘಟನೆಗಳ ಒಕ್ಕೂಟದ ಮುಖಂಡರಾದ ಕೆಂಪಣ್ಣ ಚೌಕಶಿ, ಪ್ರಶಾಂತ ಅರಳಿಕಟ್ಟಿ, ಮಲಿಕಜಾನ ತಲವಾರ, ಕೊಟ್ರೇಶ ಪಟ್ಟಣಶೆಟ್ಟಿ, ಕೆಂಪಯ್ಯಾ ಪುರಾಣಿಕ, ಅಪ್ಪಾಸಾಬ ಮುಲ್ಲಾ, ರಮೇಶ ಗಂಡವ್ವಗೋಳ, ರಸೂಲ ಮಕಾನದಾರ, ಬಸವರಾಜ ಹುಬ್ಬಳ್ಳಿ, ಶಶಿ ಚೌಕಶಿ ಇನ್ನೂ ಅನೇಕರು ಉಪಸ್ಥಿತರಿದ್ದರು.

## ಕರವೇ ಮುಖಂಡರ ಬಂಧನ ಖಂಡಿಸಿ ಪ್ರತಿಭಟನೆ



ಬೆಳಗಾವಿ: ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ ಬಳಕೆಗೆ ಆಗ್ರಹಿಸಿ ಬೆಂಗಳೂರಿನಲ್ಲಿ ಹೋರಾಟ ನಡೆಸಿದ ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಸೇರಿದಂತೆ ಹಲವು ಕಾರ್ಯಕರ್ತರನ್ನು ಬಂಧಿಸಿದ ಪೊಲೀಸರ ಕ್ರಮ ಖಂಡಿಸಿ ಗುರುವಾರ ವಿವಿಧ ಕನ್ನಡ ಸಂಘಟನೆಗಳ ಕಾರ್ಯಕರ್ತರು ಇಲ್ಲಿನ ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಇದಕ್ಕೂ ಮೊದಲು ವಿವಿಧ ಕನ್ನಡ ಸಂಘಟನೆಗಳ ಕಾರ್ಯಕರ್ತರು ಚನ್ನಮ್ಮ ವೃತ್ತದಲ್ಲಿ ಟೈಯರ್ ಗೆ ಬೆಂಕಿ ಹಚ್ಚಲು ಮುಂದಾದಾಗ ಪೊಲೀಸರು ಹಾಗೂ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆಯಿತು.

ಈ ವೇಳೆ ಈ ವೇಳೆ ಕರವೇ ಮುಖಂಡರು ಮಾತನಾಡಿ, ಕನ್ನಡ ನಾಡು, ನುಡಿ, ಜಲದ ವಿಷಯ ಬಂದಾಗ ಹೋರಾಟ ಮಾಡುವ ಕನ್ನಡ ಹೋರಾಟಗಾರರ ಮೇಲೆ ಸರಕಾರ ಬಂಧನ ಮಾಡುವುದು ಸರಿಯಲ್ಲ. ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡ ಅವರನ್ನು ತಕ್ಷಣ ಬಿಡುಗಡೆಗೊಳಿಸದಿದ್ದರೇ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅಲ್ಲದೆ, ಬೆಳಗಾವಿಯಲ್ಲಿಯೂ ಮರಾಠಿ, ಆಂಗ್ಲ ಭಾಷೆಯಲ್ಲಿರುವ ನಾಮಫಲಕಗಳನ್ನು ಕಡ್ಡಾಯವಾಗಿ ಕನ್ನಡದಲ್ಲಿಯೇ ಆಗಬೇಕು. ಇಲ್ಲದಿದ್ದರೇ ಸಾವಿರಾರು ಸಂಖ್ಯೆಯಲ್ಲಿ ಕರವೇ ಕಾರ್ಯಕರ್ತರು ಆ ನಾಮಫಲಕಗಳನ್ನು ತೆರವುಗೊಳಿಸುವ ಕಾರ್ಯ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಕರವೇ ಸೇರಿದಂತೆ ವಿವಿಧ ಕನ್ನಡ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿದ್ದರು.

## ಡಿ. 31 ಕೊನೆಯ ದಿನ

ಕೊಪ್ಪಳ: ಕೃಷಿ ಭಾಗ್ಯ ಯೋಜನೆಯಡಿ 2023-24 ನೇ ಸಾಲಿನಲ್ಲಿ ವಿವಿಧ ಘಟಕಗಳ ಸೌಲಭ್ಯ ಪಡೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯ ನಮೂನೆಗಳು ಸಮೀಪದ ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುತ್ತವೆ. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿದೆ.

ಸೌಲಭ್ಯಗಳನ್ನು ಪಡೆಯಲು ಬೇಕಾದ ಅರ್ಹತೆಗಳೇನು? ರೈತರು ಕನಿಷ್ಟ 1 ಎಕರೆ ಜಮೀನನ್ನು ಹೊಂದಿರಬೇಕು. ಈ ಯೋಜನೆಯು ಒಣ ವಲಯ ಕ್ಷೇತ್ರದ ರೈತರಿಗೆ ಮಾತ್ರ ಸಂಬಂಧಪಟ್ಟಿರುತ್ತದೆ. ಕೃಷಿ ಭಾಗ್ಯದಲ್ಲಿ ಯಾವೆಲ್ಲಾ ಸವಲತ್ತು ಪಡೆಯಬಹುದು? ಬದು ನಿರ್ಮಾಣ, ಕೃಷಿ ಹೊಂಡ, ನೀರು ಇಂಗದಂತೆ ತಡೆಯಲು ಪಾಲಿಥಿನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ, ಕೃಷಿ ಹೊಂಡದಿಂದ ನೀರು ಎತ್ತಲು ಡಿಸೇಲ್/ ಪೆಟ್ರೋಲ್ ಪಂಪ್ಸೆಟ್ ಹಾಗೂ ನೀರನ್ನು ಬೆಳೆಗೆ ಹಾಯಿಸಲು ಸೂಕ್ಷ್ಮ (ತುಂತುರು ಹನಿ) ನೀರಾವರಿ ಸೇರಿದಂತೆ ನಾನಾ ಸೌಲಭ್ಯಗಳನ್ನು ನಿಯಮಾನುಸಾರ ನೀಡಲಾಗುವುದು.

## ಅಡುಗೆ ಅನಿಲ ಸಂಪರ್ಕಕ್ಕೆ ಆಧಾರ್ ಜೋಡಣೆಗೆ ಕೊನೆಯ ದಿನಾಂಕ ನಿಗದಿ ಇಲ್ಲ; ಸುಳ್ಳು ಸಂದೇಶ, ತಪ್ಪು ಮಾಹಿತಿಯನ್ನು ಗ್ರಾಹಕರು ನಂಬಬಾರದು: ಜಂಟಿ ನಿರ್ದೇಶಕ ವಿನೋದ ಕುಮಾರ



ಧಾರವಾಡ: ಗೃಹಬಳಕೆ ಅನಿಲ ಸಂಪರ್ಕ ಹೊಂದಿರುವವರು ತಮ್ಮ ಆಧಾರ್ ಬಯೋಮೆಟ್ರಿಕ್ ನೀಡಿ, ಕೆವೈಸಿ ಮಾಡಿಸಿಕೊಳ್ಳಲು ಯಾವುದೇ ಕೊನೆಯ ದಿನಾಂಕವನ್ನು ಕೇಂದ್ರ ಸರ್ಕಾರ ನಿಗದಿಪಡಿಸಿರುವುದಿಲ್ಲ ಮತ್ತು ಇಂತಹ ತಪ್ಪು ಮಾಹಿತಿ ಅಥವಾ ಸುಳ್ಳು ಸಂದೇಶಗಳನ್ನು ಗ್ರಾಹಕರು ನಂಬಬಾರದೆಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕೆಲವು ಸಮೂಹ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಂದಿರುವ ಸುಳ್ಳು ಸಂದೇಶದಿಂದ ಗ್ರಾಹಕರು ಜಿಲ್ಲೆಯಾದ್ಯಂತ ಗ್ಯಾಸ್ ಏಜೆನ್ಸಿಗಳ ಮುಂದೆ ಕೆವೈಸಿ ಮಾಡಿಸಲು ಸಾಲುಗಟ್ಟಿ ನಿಲುತ್ತಿರುವ ಕುರಿತು ವರದಿಯಾಗುತ್ತಿದೆ.

ಗೃಹಬಳಕೆ ಅನಿಲ ಸಂಪರ್ಕ ಹೊಂದಿರುವವರು ಕೆವೈಸಿ ಮಾಡಿಸಲು ಡಿಸೆಂಬರ 31 ಕೊನೆಯ ದಿನಾಂಕವಲ್ಲ ಮತ್ತು ಸಬ್ಸಿಡಿಗಾಗಿ ಗ್ರಾಹಕರು ನಿಗದಿತ ದಿನಾಂಕದೊಳಗೆ ಕೆವೈಸಿ ಮಾಡಿಸಿಕೊಳ್ಳಬೇಕೆಂಬುವುದು ತಪ್ಪು ಮಾಹಿತಿಯಾಗಿದೆ.

ಸಾರ್ವಜನಿಕರು ಯಾವುದೇ ರೀತಿಯ ವಾಟ್ಸ್ ಮೆಸೆಜ್ ಹಾಗೂ ವದಂತಿಗಳನ್ನು ನಂಬಬಾರದು ಮತ್ತು ಅನಗತ್ಯವಾಗಿ ಗೊಂದಲಗಳಿಗೆ ಒಳಗಾಗಬಾರದು. ಗ್ರಾಹಕರು ತಮ್ಮ ಬಿಡುವಿನ ವೇಳೆಯಲ್ಲಿ ಗ್ಯಾಸ್ ಏಜೆನ್ಸಿಗಳಿಗೆ ತೆರಳಿ ಆಧಾರ್ ಬಯೋಮೆಟ್ರಿಕ್ ನೀಡಬಹುದಾಗಿದೆ. ಆದ್ದರಿಂದ ಅನಾವಶ್ಯಕವಾಗಿ ಗೊಂದಲ ಅಥವಾ ತಪ್ಪು ಮಾಹಿತಿಯಿಂದ ಗ್ಯಾಸ್ ಏಜೆನ್ಸಿಗಳ ಬಳಿ ಸರತಿ ಸಾಲಿನಲ್ಲಿ ನಿಲ್ಲುವುದು ಬೇಡವೆಂದು ಅಡುಗೆ ಅನಿಲ ಸಂಪರ್ಕ ಹೊಂದಿದ ಗ್ರಾಹಕರಿಗೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ಕುಸ್ತಿ ಪಂದ್ಯವಳಿಯಲ್ಲಿ ಪ್ರಶಸ್ತಿ ವಿಜೇತರು

ಧಾರವಾಡ: ಡಿ.21 ರಿಂದ 25,2023 ರವರೆಗೆ ದಾವಣಗೇರಿ ಜಿಲ್ಲೆಯ ಹರಿಹರದಲ್ಲಿ ನಡೆದ ರಾಜ್ಯಮಟ್ಟದ ಹೊನಲು ಬೆಳಕಿನ ಕುಸ್ತಿ ಪಂದ್ಯಾವಳಿ ಹಾಗೂ 15 ರಿಂದ 17 ವಯೋಮಿತಿ ಒಳಗಿನ ರಾಷ್ಟ್ರ ಮಟ್ಟದ ಕುಸ್ತಿ ಆಯ್ಕೆ ಪ್ರಕ್ರೀಯಯಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಧಾರವಾಡ ಅಧೀನದ ಕ್ರೀಡಾ ವಸತಿ ಶಾಲೆಯ ಕ್ರೀಡಾಪಟುಗಳು ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಿ 10 ಚಿನ್ನ, 06 ಬೆಳ್ಳಿ ಹಾಗೂ 04 ಕಂಚು ಸೇರಿ ಒಟ್ಟು 20 ಪದಕ ಪಡೆದಿದ್ದಾರೆ.

ಪ್ರಬಾವತಿ ಲಂಗೋಟಿ 36 ಕೆಜಿ ವಿಭಾಗದಲ್ಲಿ ಕಾವ್ಯಶ್ರೀ



ಪ್ರಶಸ್ತಿಯನ್ನು ಮತ್ತು 46 ಕೆಜಿಯಲ್ಲಿ ಪುಷ್ಪ ನಾಯಕ ಕರ್ನಾಟಕ ಮಹಿಳಾ ಬಾಲ ಕಿಶೋರಿ ಪ್ರಸ್ತಿಯನ್ನು ಪಡೆದಿದ್ದಾಳೆ. ಅಭಿ ಕುರುಬರ ಹಾಗೂ ಬಜರಂಗಿ ದೊಡಮನಿ ಯಂಕಪ್ಪ ಕುಡಗಿ, ಸಲಿಯಾದನವರ, ಕ್ರೀಡಾ ಇಲಾಖೆಗೆ ಕೀರ್ತಿಯನ್ನು ತಂದಿದ್ದಾರೆ.

## ಅವಧಿ ವಿಸ್ತರಣೆ

ಶಿವಮೊಗ್ಗ: ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ **WWW.KSB.GOV.IN** ದಲ್ಲಿ ಜೆ.ಸಿ.ಓ ರ್ಯಾಂಕ್ವರೆಗಿನ ಮಾಜಿ ಸೈನಿಕರ ಮಕ್ಕಳು, ದ್ವಿತೀಯ ಪಿ.ಯು.ಸಿ ಯಲ್ಲಿ 60 ಪ್ರತಿಶತ ಕ್ಕಿಂತ ಅಧಿಕ ಅಂಕಗಳನ್ನು ಪಡೆದು, ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ 2023ನೇ ಸಾಲಿನಲ್ಲಿ ಪ್ರವೇಶಾತಿ ಪಡೆದವರು ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆ (ಪ್ರಧಾನ ಮಂತ್ರಿ ಸ್ಕಾಲರ್ಷಿಪ್ ಸ್ಕೀಂ) ಎಂಬ ಶೀರ್ಷಿಕೆಯಡಿಯಲ್ಲಿ ಶಿಷ್ಯವೇತನಕ್ಕಾಗಿ ಅರ್ಜಿಯನ್ನು ಅಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ದಿನಾಂಕ 01-01-2024 ರಿಂದ 05-01-2024 ರವರೆಗೆ ವಿಸ್ತರಿಸಲಾಗಿದೆ.

ಫಲಾನುಭವಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರ ದೂರವಾಣಿ ಸಂಖ್ಯೆ 08182-220925 ಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಉಪ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿ ಳಿಸಿರುತ್ತಾರೆ.

# ಜೈಲು ಸೇರಿದ ಎರಡೇ ತಾಸಲ್ಲಿ ಕೈದಿ ಸಾವು

ಚಿಂತಾಮಣಿ: ವರದಕ್ಷಿಣೆ ಕಿರುಕುಳದ ಆರೋಪದಡಿ ವಾರೆಂಟ್ ಮೇಲೆ ಜೈಲಿಗೆ ಬಂದಿದ್ದ ಆರೋಪಿಯೊಬ್ಬ 2 ತಾಸಿನಲ್ಲಿ ಸಾವನ್ನಪ್ಪಿರುವ ಘಟನೆ ಕೋಲಾರ ಜಿಲ್ಲೆಯ ಚಿಂತಾಮಣಿ ನಗರದ ಉಪಕಾರಾಗೃಹದಲ್ಲಿ ರಾತ್ರಿ ನಡೆದಿದೆ.

ಮೃತ ಆರೋಪಿಯನ್ನು ಚಿಂತಾಮಣಿ ತಾಲೂಕಿನ ಗುಡಿಸಲಹಳ್ಳಿ ಗ್ರಾಮದ ಮುನಿರೆಡ್ಡಿ (38) ಎಂದು ಗುರುತಿಸಲಾಗಿದೆ. 2016 ರಲ್ಲಿ ವರದಕ್ಷಣೆ ಕಿರುಕುಳದ ದೂರಿನಲ್ಲಿ ವಾರೆಂಟ್ ಆಗಿ 2023 ಡಿಸೆಂಬರ್ 26 ರ ಮಂಗಳವಾರ ಸಂಜೆ ಚಿಂತಾಮಣಿ ನ್ಯಾಯಾಲಯದ ಆದೇಶದಂತೆ ಆರೋಪಿಯನ್ನು ಉಪಕಾರಾಗೃಹಕ್ಕೆ ಸೇರಿಸಲಾಗಿತ್ತು. ಜೈಲು ಸೇರಿದ 2 ತಾಸಿಗೆ ಆರೋಪಿ ಮುನಿರೆಡ್ಡಿಗೆ ಲೋ ಬಿಪಿ ಆಗಿ ಕುಸಿದು ಬಿದ್ದಿದ್ದು, ಕೂಡಲೆ



ಕಾರಾಗೃಹ ಅಧಿಕಾರಿಗಳು ಆತನನ್ನು ನಗರದ ಸಾರ್ವಜನಿಕ ಆಸ್ಪತ್ರೆಗೆ ಸೇರಿಸಿದರಾದರೂ ಚಿಕಿತ್ಸೆ ಫಲಿಕಾರಿಯಾಗದೆ ಆರೋಪಿ ಮೃತಪಟ್ಟಿರುವುದಾಗಿ ಕಾರಾಗೃಹ ಅಧಿಕಾರಿಗಳು ತಿಳಿಸಿದ್ದಾರೆ.

ಚಿಂತಾಮಣಿ ಉಪಕಾರಾಗೃಹದಲ್ಲಿ 112 ಖೈದಿಗಳಿದ್ದು, ಇಲ್ಲಿ ಯಾವುದೇ ಪ್ರಾಥಮಿಕ ಆರೋಗ್ಯ ಚಿಕಿತ್ಸೆಯ ವ್ಯವಸ್ಥೆ ಇಲ್ಲದಿರುವುದು ದುರದುಷ್ಟಕರವಾಗಿದೆ.

ಆರೋಗ್ಯವಂತವಾಗಿದ್ದ ವ್ಯಕ್ತಿಯೋರ್ವ ಜೈಲು ಸೇರಿದ 2 ಗಂಟೆಗಳಲ್ಲಿ ಸಾವನ್ನಪ್ಪಿರುವುದು ಸಾರ್ವಜನಿಕ ವಲಯದಲ್ಲಿ ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಂತಿದೆ. ವಿಷಯ ತಿಳಿದು ಜೆ.ಎಂ. ಎಫ್.ಸಿ ನ್ಯಾಯಾಲಯದ ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಎಂ.ಪ್ರಕಾಶ್, ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಮೃತನ ಶವ ಪರಿಶೀಲನೆ ನಡೆಸಿದ್ದು, ನಗರ ಠಾಣೆಯ ಪೊಲೀಸರು ಆಸ್ಪತ್ರೆಗೆ ಭೇಟಿಯಿತ್ತು, ಪರಿಶೀಲನೆ ನಡೆಸಿ ಮೃತರ ಸಂಬಂಧಿಕರು ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಕೋವಿಡ್ ಸಂಪರ್ಕಿತರ ರೋಗ ಲಕ್ಷಣದ ಪರೀಕ್ಷೆ, ಡೆತ್ ಅಡಿಟ್ ಗೆ ಅಧಿಕಾರಿಗಳಿಗೆ ರಾಜ್ಯ ಸರ್ಕಾರದ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಕೋವಿಡ್ -19 ಪ್ರಕರಣಗಳ ಹೆಚ್ಚಳದ ಹಿನ್ನೆಲೆಯಲ್ಲಿ ಪಾಸಿಟಿವ್ ಕೇಸ್ ಗಳ ರೋಗಲಕ್ಷಣದ ಸಂಪರ್ಕಿತರನ್ನು ಪರೀಕ್ಷಿಸುವುದು, ಟೆಲಿ ಐಸಿಯು ಬಳಕೆ ಮತ್ತು ಸೋಂಕಿನಿಂದಾಗಿ ಸಾವನ್ನಪ್ಪಿದವರ ಲೆಕ್ಕಪರಿಶೋಧನೆ ಮುಂತಾದ ಕ್ರಮಗಳನ್ನು ಕೈಗೊಳ್ಳುವಂತೆ ರಾಜ್ಯ ಸರ್ಕಾರ ಗುರುವಾರ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ಹೊಸ ವರ್ಷಾಚರಣೆ ಸಮೀಪಿಸುತ್ತಿದ್ದಂತೆ, ರೋಗಿಗಳಿಗೆ ಚಿಕಿತ್ಸೆ ನೀಡಲು ಕೆಲವು ಐಸಿಯು ಹಾಸಿಗೆಗಳು ಸೇರಿದಂತೆ ಕೋವಿಡ್-19 ಐಸೋಲೇಷನ್ ವಾರ್ಡ್ ಸ್ಥಾಪಿಸುವಂತೆ ಸಲಹೆ ನೀಡಲಾಗಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯ ಇಂದು ಸುತ್ತೋಲೆ ಹೊರಡಿಸಿದ್ದು, ನಿರ್ದೇಶನಗಳನ್ನು ಅನುಸರಿಸಲಾಗುತ್ತಿದೆ ಎಂಬುದನ್ನು ಖಾತ್ರಿಪಡಿಸಿಕೊಳ್ಳುವಂತೆ ರಾಜ್ಯ ಆರೋಗ್ಯ ಅಧಿಕಾರಿಗಳು ಮತ್ತು ಬಿಬಿಎಂಪಿ ಅಧಿಕಾರಿಗಳಿಗೆ ಸೂಚಿಸಲಾಗಿದೆ.

"ಕೋವಿಡ್ -19 ಅನ್ನು ಮೊದಲೇ ಪತ್ತೆಹಚ್ಚಲು ಮತ್ತು ರೋಗಿಗೆ ಆರಂಭಿಕ ಚಿಕಿತ್ಸೆಯನ್ನು ಪ್ರಾರಂಭಿಸಲು ಪರೀಕ್ಷೆ ಆಧಾರವಾಗಿದೆ.

ಮುನ್ನೆಚ್ಚರಿಕೆ ಕ್ರಮವಾಗಿ ಈ ಹಿಂದೆ ನೀಡಲಾದ ಉದ್ದೇಶಿತ ಪರೀಕ್ಷಾ ಮಾನದಂಡಗಳ ಜೊತೆಗೆ, ಎಲ್ಲಾ ರೋಗಲಕ್ಷಣದ ನಿಕಟ ಸಂಪರ್ಕಿತರನ್ನು ಸಹ ಕೋವಿಡ್ 19 ಗಾಗಿ ಪರೀಕ್ಷಿಸಬೇಕು ಎಂದು ಸುತ್ತೋಲೆಯಲ್ಲಿ ಹೇಳಲಾಗಿದೆ.

ಕೋವಿಡ್ ಸೋಂಕಿನ ಉಪತಳಿಯಾದ ಎಟಿ.1 ಸಂಬಂಧಿಸಿದಂತೆ ರಾಜ್ಯದಲ್ಲಿ ಇದುವರೆಗೂ 34 ಪ್ರಕರಣಗಳು




ವರದಿಯಾಗಿರುವ ಹಿನ್ನೆಲೆಯಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಮಾರ್ಗಸೂಚಿ ಹೊರಡಿಸಲಾಗಿದೆ.

ಪ್ರಸ್ತುತ ಸುಮಾರು 400 ಕೋವಿಡ್ -19 ರೋಗಿಗಳು ಹೋಮ್ ಐಸೋಲೇಶನ್ ನಲ್ಲಿದ್ದಾರೆ. ಕೆಲವರು ಆಸ್ಪತ್ರೆಗಳಲ್ಲಿ ಸಾಮಾನ್ಯ ಪ್ರತ್ಯೇಕ ವಾರ್ಡ್‌ಗಳಲ್ಲಿ ದಾಖಲಾಗಿದ್ದಾರೆ. "ಇನ್ಮುಂದೆ, ಹೋಮ್ ಐಸೋಲೇಶನ್ ನಲ್ಲಿರುವ ಮತ್ತು ಸಾಮಾನ್ಯ ವಾರ್ಡ್‌ಗಳಲ್ಲಿ ದಾಖಲಾಗಿರುವ ಕೋವಿಡ್ -19 ರೋಗಿಗಳ ವೈದ್ಯಕೀಯ ಸ್ಥಿತಿ ಮತ್ತು ರೋಗಲಕ್ಷಣಗಳನ್ನು ನಿರ್ಣಯಿಸಲು ಮತ್ತು ಚಿಕಿತ್ಸೆಗಾಗಿ ಮುಂದಿನ ಕ್ರಮಗಳನ್ನು ಸೂಚಿಸಲು, PHC/ UPHC/ ನಮ್ಮ ಚಿಕಿತ್ಸಾಲಯಗಳ ವೈದ್ಯರು/ ಅರೆವೈದ್ಯಕೀಯ ಸಿಬ್ಬಂದಿಗಳು ಅವರಿರುವಲ್ಲಿಗೆ ಒಮ್ಮೆಯಾದರು ಭೇಟಿ ನೀಡುತ್ತಾರೆ ಎಂದು ತಿಳಿಸಿದೆ.

"ಐಸಿಯುಗಳಲ್ಲಿ ದಾಖಲಾದ ಎಲ್ಲಾ ಕೋವಿಡ್ ರೋಗಿಗಳನ್ನು ಹಿಂದಿನ ಕೋವಿಡ್ ಅಲೆಗಳ ಸಮಯದಲ್ಲಿ ಮಾಡಿದಂತೆ, ರಾಜ್ಯ ಪ್ರಧಾನ ಕಛೇರಿಯಿಂದ ಟೆಲಿ ಐಸಿಯು ಮೂಲಕ ಮೇಲ್ವಿಚಾರಣೆ ಮಾಡಬೇಕು.ಮತ್ತು ಕೋವಿಡ್ ಸಾವುಗಳ ಲೆಕ್ಕಪರಿಶೋಧನೆಗಾಗಿ ಜಿಲ್ಲಾ ಡೆತ್ ಆಡಿಟ್ ಸಮಿತಿಗಳಿಗೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ.

"ರಾಜ್ಯ ಡೆತ್ ಆಡಿಟ್ ಸಮಿತಿಯು ಕೋವಿಡ್ ಸಾವುಗಳನ್ನು ಆಡಿಟ್ ಮಾಡುತ್ತದೆ ಮತ್ತು ಕಾಲಕಾಲಕ್ಕೆ ಆರೋಗ್ಯ ಆಯುಕ್ತಾಲಯಕ್ಕೆ ಶಿಫಾರಸುಗಳೊಂದಿಗೆ ವರದಿಗಳನ್ನು ಸಲ್ಲಿಸುತ್ತದೆ. ಕೋವಿಡ್-19 ಪರೀಕ್ಷೆಗಾಗಿ ಸಿಟಿ ಥ್ರೋಕ್ಸ್ ಸ್ಕ್ಯಾನ್ ಬಳಸಬಾರದು ಎಂದು ನಿರ್ದೇಶಿಸಲಾಗಿದೆ. ಈ ವಿಷಯದಲ್ಲಿ ಕಟ್ಟುನಿಟ್ಟಾದ ಸೂಚನೆಗಳು ಮತ್ತು ನಿಯಮಗಳನ್ನು ಸರ್ಕಾರಿ ಮತ್ತು ಖಾಸಗಿ ಆರೋಗ್ಯ ಸೌಲಭ್ಯಗಳು ಮತ್ತು ರೋಗನಿರ್ಣಯ ಕೇಂದ್ರಗಳಿಂದ ನಿರೀಕ್ಷಿಸಲಾಗಿದೆ.

## ಹುಟ್ಟಿದ ಮಗು ಹೆಣ್ಣು ಎಂದು ಚರಂಡಿಯಲ್ಲಿ ಇಟ್ಟು ಹೋದ ಪಾಪಿಗಳು



ಬೆಂಗಳೂರು: ಹುಟ್ಟಿದ ಮಗು ಹೆಣ್ಣು ಎಂದು ತಿಳಿದ ನಂತರ ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿಸಿಕೊಂಡು ಚರಂಡಿಯಲ್ಲಿ ಬೀಸಾಡಿ ಹೋಗಿರೋದು ಬೆಳಕಿಗೆ ಬಂದಿದೆ.

ಆನೇಕಲ್ ಬಳಿಯ ಚರಂಡಿ ಒಂದರಲ್ಲಿ ನವಜಾತ ಹೆಣ್ಣು ಶಿಶು ಪತ್ತೆಯಾಗಿದೆ. ಮಗು ಅಳುವ ಶಬ್ದ ಕೇಳಿ ಚರಂಡಿ ಬಳಿ ಹೋಗಿ ನೋಡಿದಾಗ ನವಜಾತ ಹೆಣ್ಣು ಶಿಶು ಪತ್ತೆಯಾಗಿದೆ. ಕವರ್ನಲ್ಲಿ ಸುತ್ತಿ ಚರಂಡಿ ಮಧ್ಯೆ ಪಾಪಿಗಳು ಎಸೆದು ಹೋಗಿದ್ದಾರೆ. ಶಿಶುವನ್ನು ಹೊರ ತೆಗೆದು ರಕ್ಷಣೆ ಮಾಡಲಾಗಿದೆ. ಇನ್ನು ಮಗು ಬೀಸಾಡಿದ್ದ ವಸ್ತ್ರದಲ್ಲಿ ಆಸ್ಪತ್ರೆಯ ರಶೀದಿ ಪತೆಯಾಗಿದೆ.

ರಶೀದಿಯಲ್ಲಿ ಏನಿತ್ತು? ಮಗು ಹುಟ್ಟಿರುವುದು ವಾಣಿ ವಿಲಾಸ ಆಸ್ಪತ್ರೆಯಲ್ಲಿ. ತಾಯಿ ಹೆಸರು ಸುಪ್ರಿಯಾ. ತಂದೆ ಶಶಿಧರ್ ಎಂದು ಬರೆಯಲಾಗಿದೆ. ಇಬ್ಬರು ಜಿಗಣಿ ನಿವಾಸಿಗಳು ಎಂಬುವುದು ರಶೀದಿಯಿಂದ ತಿಳಿದುಬಂದಿದೆ. ಪ್ರಕರಣ ದಾಖಲಿಸಿಕೊಂಡಿರುವ ಆನೇಕಲ್ ಪೊಲೀಸರು, ಮಗುವಿನ ಪೋಷಕರಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

## ಬೈಲಹೊಂಗಲದಲ್ಲಿ ಜ. 5-6ರಂದು ಜೋಡೆತ್ತಿನ ಖಾಲಿ ಗಾಡಾ ಓಡಿಸುವ ಸ್ಪರ್ಧೆ



ಬೈಲಹೊಂಗಲ: ಪ್ರಪ್ರಥಮ ಬಾರಿಗೆ ಕರುನಾಡ ವಿಜಯಸೇನೆ ತಾಲೂಕಾ ಘಟಕದ ಆಶ್ರಯದಲ್ಲಿ ಜ. 5 ಮತ್ತು 6ರಂದು ರಾಜ್ಯ ಮತ್ತು ಅಂತರಾಜ್ಯ ಮಟ್ಟದ ಜೋಡಿ ಎತ್ತುಗಳಿಂದ ಖಾಲಿ ಗಾಡಾ ಓಡಿಸುವ ಭಾರೀ ಜಂಗೀ ಶರತ್ತು, ಪಟ್ಟಣದ ಬೈಲವಾಡ ರಸ್ತೆಯ ವಿದ್ಯಾನಗರ 4ನೇ ಅಡ್ಡರಸ್ತೆಯ ಶಿವಾನಂದ ಮುದಕವಿ, ಬಿ.ಎಸ್.ತಳವಾರ ಅವರ ಜಮೀನಿನಲ್ಲಿ ಅದ್ದೂರಿಯಾಗಿ ಜರುಗಲಿದ್ದು, ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹಿರಿಯರಾದ ಗಂಗಪ್ಪ ಬೋಳಣ್ಣವರ ಹೇಳಿದರು.

ಪಟ್ಟಣದಲ್ಲಿ ಭಿತ್ತಿ ಪತ್ರ ಬಿಡುಗಡೆಗೊಳಿಸಿ ಮಾತನಾಡಿ, ಸ್ವಾತಂತ್ರ್ಯದ ಬೆಳ್ಳಿ ಚುಕ್ಕಿ ವೀರರಾಣಿ ಕಿತ್ತೂರು ಚನ್ನಮ್ಮ ಅವರು ದಿ.23 1824 ರಂದು ಬ್ರಿಟಿಷ್ ಕಂಪನಿ ಸರಕಾರದ ವಿರುದ್ಧ ಯುದ್ಧ ಮಾಡಿ ಅವರನ್ನು ಸೋಲಿಸಿದ ದಿನವಾಗಿದೆ. ಈ ಘಟನೆ ನಡೆದು 200 ವರ್ಷಗಳು ಆಗಿವೆ. ಇದರ ಸ್ಮರಣಾರ್ಥ ಭಾರೀ ಜಂಗೀ ಜೋಡೆತ್ತುಗಳ ಖಾಲಿ ಗಾಡಾ ಓಡಿಸುವ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ಇದರಿಂದ ರೈತ ಬಾಂಧವರಿಗೆ ತಮ್ಮ ಹೋರಿಗಳನ್ನು ಶರತ್ತಿನಲ್ಲಿ ಭಾಗವಹಿಸಲು ಅವಕಾಶ ಇದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಪುರಸಭೆ ಸದಸ್ಯ ವಿಜಯ ಬೋಳಣ್ಣವರ, ಸಾಮಾಜಿಕ ಕಾರ್ಯಕರ್ತ ರಫೀಕ ಬಡೇಘರ ಮಾತನಾಡಿ, ಕರುನಾಡ ವಿಜಯ ಸೇನೆಯ ಆಶ್ರಯದಲ್ಲಿ ರೈತರ ಅಭಿಲಾಷೆಯಂತೆ ಭಾರೀ ಜಂಗೀ ಶರತ್ತು ಏರ್ಪಡಿಸಲಾಗಿದ್ದು, ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ವಿಜೇತರಿಗೆ ಅತ್ಯಾಕರ್ಷಕ ಬಹುಮಾನವನ್ನು ನೀಡಲಾಗುತ್ತದೆ ಎಂದರು.

ಸಮಾರಂಭವನ್ನು ನ್ಯಾಯವಾದಿ ಶ್ರೀಶೈಲ ಬೋಳಣ್ಣವರ ಉದ್ಘಾಟಿಸಲಿದ್ದು, ದಿವ್ಯ ಸಾನಿಧ್ಯವನ್ನು ಬೆಳವಡಿಯ ಮಹಾಗಣಪತಿ ಶಕ್ತಿ ಪೀಠದ ಶಿವಪಂಚಾಕ್ಷರಿ ಸ್ವಾಮೀಜಿ, ಮಹಾಂತೇಶಶಾಸ್ತ್ರಿ ಆರಾದ್ರಿಮಠ ವಹಿಸಲಿದ್ದರೆ. ಅತಿಥಿಗಳಾಗಿ ಗಂಗಪ್ಪ ಬೋಳಣ್ಣವರ, ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ, ಕರುನಾಡ ವಿಜಯ ಸೇನೆ ರಾಜ್ಯಾಧ್ಯಕ್ಷ ಎಚ್.ಎನ್.ದೀಪಕ, ಪುರಸಭೆ ಮಾಜಿ ಉಪಾಧ್ಯಕ್ಷ ಬಿ.ಎಂ.ಕುಡಸೋಮಣ್ಣವರ, ಸದಸ್ಯ ಬಾಬು ಕುಡಸೋಮಣ್ಣವರ, ಜಿಲ್ಲಾಧ್ಯಕ್ಷ ಸುರೇಶ ಇಟಗಿ, ಪತ್ರಕರ್ತರಾದ ಮಹಾಂತೇಶ ತುರಮರಿ, ಈಶ್ವರ ಹೋಟಿ, ಕಲಾವಿದ ಸಿ.ಕೆ.ಮೆಕ್ಕೇದ, ಸಾಮಾಜಿಕ ಕಾರ್ಯಕರ್ತ ರಫೀಕ ಬಡೇಘರ, ತಾಲೂಕಾಧ್ಯಕ್ಷ ವಿಠ್ಠಲ ಕಡಕೋಳ, ಕಾರ್ಖಾನೆ ನಿರ್ದೇಶಕ ರಾಜು ಕುಡಸೋಮಣ್ಣವರ, ಬಸಪ್ಪ ಕಡಕೋಳ ಆಗಮಿಸಲಿದ್ದಾರೆ ಎಂದರು.

ಪ್ರಥಮ ಬಹುಮಾನ 1 ಲಕ್ಷ ರೂ., ದ್ವಿತೀಯ ಬಹುಮಾನ 80 ಸಾವಿರ ರೂ., ತೃತೀಯ ಬಹುಮಾನ 70 ಸಾವಿರ ರೂ. ಇನ್ನೂ 20 ಆಕರ್ಷಕ ಬಹುಮಾನಗಳನ್ನು ನೀಡಲಿದ್ದು, ಪ್ರವೇಶ ಫೀ 8 ಸಾವಿರ ರೂ.ನಿಗದಿ ಪಡಿಸಲಾಗಿದೆ. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದರು.

ಪುರಸಭೆ ಸದಸ್ಯ ಉಳವಪ್ಪ ಬಡ್ಡಿಮನಿ, ವಿಠ್ಠಲ ಅಂದಾನಿ, ಆನಂದ ಯರಗಟ್ಟಿ, ಬಸವರಾಜ ಯಾಸನ್ನವರ, ಅನೀಲ ಬೋಳಣ್ಣವರ, ಸೋಮಪ್ಪ ಪಟ್ಟೇದ, ಅದೃಶ್ಯಪ್ಪ ಹುಚ್ಚನ್ನವರ, ಮಲ್ಲಿಕಾರ್ಜುನ ಕಮತಗಿ, ವಿಜಯ ದಳವಾಯಿ, ಶ್ರೀಕಾಂತ ಮತ್ತಿಕೊಪ್ಪ ಉಪಸ್ಥಿತರಿದ್ದರು.

## ಮಹಾತೇಶ ನಗರ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ



ಬೆಳಗಾವಿ: ಮಹಾಂತೇಶ ನಗರದ ಮಾಧ್ಯಮಿಕ ಶಾಲೆಯಲ್ಲಿ 1990–91ನೇ ಸಾಲಿನ ಎಸ ಎಸ ಎಲ್ ಸಿ ವಿದ್ಯಾರ್ಥಿ ವಿದ್ಯಾರ್ಥಿನಿಯರಿಂದ ಗುರು ವಂದನಾ ಕಾರ್ಯಕ್ರಮ ಜರುಗಿತು.

ಹಿರಿಯ ನಿವೃತ್ತ ಗುರುಮಾತೆ ಜಿ. ಬಿ ಬಾಗೋಜಿ ಅಧ್ಯಕ್ಷತೆ ವಹಿಸಿದ್ದರು.

ಪಿ.ಸಿ ನಂಜಯ್ಯನ ಮಠ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಸಾಮಾಜಿಕ ಶಿಕ್ಷಣ ವ್ಯವಸ್ಥೆ ಹಾಗೂ ಆಧುನಿಕ ತಂತ್ರಜ್ಞಾನದ ಅವಶ್ಯಕತೆಯ ಬಗ್ಗೆ ಮಾತನಾಡಿದರು.

ಹೈಸ್ಕೂಲಿನ ಹಳೆಯ ವಿಧ್ಯಾರ್ಥಿ ನ್ಯಾಯವಾದಿ ಎಸ್ ಬಿ ಬೂದಿಹಾಳ ಅವರು ಗುರುಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡುತ್ತ ಗುರುಗಳ ಕೃಪೆ ಇಲ್ಲದೇ ಸಾಧನೆ ಸಾಧ್ಯವಿಲ್ಲ. ಮಾನವನ ವ್ಯಕ್ತಿತ್ವದ ವಿಕಾಸಕ್ಕೆ ವಿದ್ಯೆಯೇ ಮೂಲ ಸಾಧನ. ಮನುಷ್ಯ ಬೆಳೆಯಬೇಕೆಂದರೆ ಅವನ ಅಂತರಂಗ ಹಿರಿದಾಗಿರಬೇಕು. ಶ್ರೇಷ್ಠ ವಿಷಯಗಳತ್ತ ಗಮನ ಹರಿಸಬೇಕೆಂದು ಹೇಳಿದರು.

ಶಿಕ್ಷಕರಾದ ಸುಜಾತಾ ವಸ್ತ್ರದ ' ರಾಜೇಂದ್ರ ಕೊಳಲಗಿ 'ಜಿ ಎಸ್ ಹಿರೇಮಠ, ಜಗದೀಶ ಗಣೇಶಗುಡಿ, ಪಿ ಬಿ ಪಾಟೀಲ ರನ್ನು ಹಳೆಯ ವಿದ್ಯಾರ್ಥಿಗಳು ಗೌರವಿಸಿ ಸನ್ಮಾನಿಸಿದರು.

ಹಳೆಯ ವಿದ್ಯಾರ್ಥಿಗಳಾದ ಸಿದ್ದಲಿಂಗ ಚಟ್ಟಿ, ಶ್ರೀಕಾಂತ ತೋರಗಲ್, ಮಲ್ಲಿಕಾರ್ಜುನ ರಾಗಿ, ಬಸವರಾಜ ಬಡಿಗೇರ' ತ್ರಿವೇಣಿ ಚಲವಾದಿ' ಮಂಗಳಾ ಪೈರಾಶಿ, ಮೃತ್ಯುಂಜಯ ಜಾಣನ್ನವರ, ಸದಾನಂದ ಉಡಕೇರಿ ವಿಜಿಯ ನಾಗನೂರಿ ರಾಜೇಶ್ವರಿ ಮಲ್ಲಾಪೂರ, ಉಮಾ ಹಿರೇಮಠ, ರಮೇಶ ಪಾಟೀಲ ಉಪಸ್ತಿತರಿದ್ದರು.

ಎ. ಎನ್ ಬೂದಿಹಾಳ ಕಾರ್ಯಕ್ರಮ ನಿರುಪಿಸಿದರು, ಭರತೇಶ ಅಮಟೂರ ವಂದಿಸಿದರು.





## ಮಂತ್ರಿ ಮಾಲ್‌ಗೆ ಬೀಗ ಜಡಿದ ಬಿಬಿಎಂಪಿ

ಬೆಂಗಳೂರು: ತೆರಿಗೆ ಬಾಕಿ ಉಳಿಸಿಕೊಂಡಿರುವ ಹಿನ್ನೆಲೆಯಲ್ಲಿ ನಗರದ ಪ್ರತಿಷ್ಠಿತ ಮಂತ್ರಿ ಮಾಲ್‌ಗೆ ಬಿಬಿಎಂಪಿ ಅಧಿಕಾರಿಗಳು ಬೀಗ ಹಾಕಿದ್ದಾರೆ. ಈ ಹಿಂದೆ ಕೋವಿಡ್ ಸಂದರ್ಭ ಸೇರಿ ಅನೇಕ ಬಾರಿ ಮಂತ್ರಿ ಮಾಲ್‌ಗೆ ಬೀಗ ಹಾಕಲಾಗಿತ್ತು. ಇದೀಗ ಮತ್ತೆ ದೊಡ್ಡ ಮೊತ್ತದ ತೆರಿಗೆ ಕಟ್ಟಲು ವಿಫಲವಾದ ಹಿನ್ನೆಲೆಯಲ್ಲಿ ಮತ್ತೊಮ್ಮೆ ಮಂತ್ರಿ ಮಾಲ್‌ಗೆ ಬೀಗ ಹಾಕಲಾಗಿದೆ.

51 ಕೋಟಿ ರೂ. ತೆರಿಗೆ ಬಾಕಿ: ಮಂತ್ರಿ ಮಾಲ್ 2018–19ರಿಂದ ಆಸ್ತಿತೆರಿಗೆ ಪಾವತಿಸಿಲ್ಲ ಎನ್ನಲಾಗಿದೆ. ಕಳೆದ ಫೆಬ್ರವರಿ ವೇಳೆಗೆ ಈ ಮೊತ್ತ 42.69 ಕೋಟಿ ರೂ.ಗೆ ಏರಿತ್ತು. ಆ ಸಂದರ್ಭದಲ್ಲಿ ಪಾಲಿಕೆ ಪಶ್ಚಿಮ ವಿಭಾಗದ ಜಂಟಿ ಆಯುಕ್ತರು ನೋಟಿಸ್ ನೀಡಿ ಎಚ್ಚರಿಕೆ ನೀಡಿದ್ದರು. ಈಗ ಒಟ್ಟು ಮೊತ್ತ 51 ಕೋಟಿ ರೂ.ಗೆ ಏರಿದೆ. ಹೀಗಾಗಿ ಮಾಲ್‌ಗೆ ಬೀಗ ಹಾಕಿಸಿದ್ದಾರೆ.

ಸದ್ಯ ಪಾಲಿಕೆಗೆ ಆದಾಯ ಕೊರತೆ ಉಂಟಾಗಿರುವ ಕಾರಣ ವಿವಿಧ ಸಂಪನ್ಮೂಲಗಳಿಂದ ಹಣ ಕ್ರೋಢೀಕರಣಕ್ಕೆ ಆದ್ಯತೆ ನೀಡಿದೆ. ಈ ನಿಟ್ಟಿನಲ್ಲಿ ಹೆಚ್ಚು ತೆರಿಗೆ ಬಾಕಿ ಉಳಿಸಿಕೊಂಡಿರುವವರಿಗೆ ನೋಟಿಸ್ ನೀಡಿ ತೆರಿಗೆ ಬಾಕಿ ವಸೂಲು ಮಾಡಲಾಗುತ್ತಿದೆ. ಇತ್ತೀಚೆಗೆ ಮಧ್ಯಮ ಪ್ರಮಾಣದ ವಾಣಿಜ್ಯ ಮಳಿಗೆಗಳು ಸೇರಿ 800ಕ್ಕೂ ಹೆಚ್ಚು ಅಂಗಡಿ, ಮುಂಗಟ್ಟು, ಮಾಲ್‌ಗಳಿಗೆ ಬೀಗ ಹಾಕಲಾಗಿದೆ.

## ಮನೆ ಮುಂದೆ ನಿಲ್ಲಿಸಿದ ಆಟೋಗೆ ಬೆಂಕಿ ಹಚ್ಚಿದ ದುಷ್ಕರ್ಮಿಗಳು



ಹುಬ್ಬಳ್ಳಿ: ಮನೆ ಮುಂದೆ ನಿಲ್ಲಿಸಿದ ಆಟೋಗೆ ದುಷ್ಕರ್ಮಿಗಳು ಬೆಂಕಿ ಇಟ್ಟ ಘಟನೆ ಹಳೇಹುಬ್ಬಳ್ಳಿಯ ನೇಕಾರನಗರದ ಮಹಾಲಕ್ಷ್ಮೀ ಕಾಲೋನಿಯಲ್ಲಿ ನಡೆದಿದೆ. ವೀರಣಗೌಡ ಪಾಟೀಲ್ ಎಂಬುವವರಿಗೆ ಸೇರಿದ ಆಟೋಗೆ ಬೆಂಕಿಗೆ ಸುಟ್ಟು ಕರಕಲಾಗಿದೆ. ವೀರಣಗೌಡ ಪಾಟೀಲ್ ಪ್ರತಿದಿನದಂತೆ ಬಾಡಿಗೆ ಹೊಡೆದು ರಾತ್ರಿ ಮನೆ ಮುಂದೆ ನಿಲ್ಲಿಸಿದ್ದರು. ಆದರೆ ಕಿಡಿಗೇಡಿಗಳು ಮಧ್ಯರಾತ್ರಿ ಬೆಂಕಿ ಹಚ್ಚಿದ್ದಾರೆ. ಆಟೋಗೆ ಬೆಂಕಿ ಹತ್ತಿದ್ದನ್ನು ನೋಡಿದ ಸ್ಥಳೀಯರು ಮಾಲೀಕನಿಗೆ ಮಾಹಿತಿ ನೀಡಿದ್ದಾರೆ.

ಬಳಿಕ ವೀರಣಗೌಡ ಪಾಟೀಲ್ ಸಾರ್ವಜನಿಕರೊಂದಿಗೆ ಸೇರಿ ಬೆಂಕಿ ನಿಂದಿಸಿದ್ದಾರೆ. ಬೆಂಕಿ ನಂದಿಸುವಷ್ಟರಲ್ಲಿ ಆಟೋ ಸಂಪೂರ್ಣ ಸುಟ್ಟು ಕರಕಲಾಗಿದೆ. ವೀರಣಗೌಡ ಪಾಟೀಲ್ ಮತ್ತು ಕುಟುಂಬಸ್ಥರು ಆಟೋ ದುಡಿಮೆಯನ್ನೇ ನಂಬಿದ್ದರು. ಆದರೆ ಕರಕಲಾಗಿದ್ದ ಆಟೋದಿಂದಾಗಿ ಈಗ ಕಂಗಾಲಾಗಿದ್ದಾರೆ. ಸ್ಥಳಕ್ಕೆ ಹಳೇಹುಬ್ಬಳ್ಳಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

## 139ನೇ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ; ರೋಗಿಗಳಿಗೆ ಹಣ್ಣು, ಹಾಲು ವಿತರಣೆ



ಗೋಕಾಕ: ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ 139ನೇ ಸಂಸ್ಥಾಪನಾ ದಿನಾಚರಣಾ ಹಿನ್ನೆಲೆಯಲ್ಲಿ ನಗರದ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ಕಾಂಗ್ರೆಸ್ ಮುಖಂಡರು ಹಣ್ಣು–ಹಂಪಲು, ಹಾಲು ವಿತರಿಸಿದರು.

ಕಾಂಗ್ರೆಸ್ ಮುಖಂಡ ವಿವೇಕ ಜತ್ತಿ ಮಾತನಾಡಿ, ಲೋಕೋಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರ ಆದೇಶ ಮೇರೆಗೆ ನಗರದಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ 139ನೇ ಸಂಸ್ಥಾಪನಾ ದಿನಾಚರಣಾ ಆಚರಿಸುತ್ತಿದ್ದೇವೆ ಎಂದರು.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ತನ್ನ ಭವ್ಯ ಇತಿಹಾಸದ 138 ವರ್ಷಗಳನ್ನು ಡಿ. 28ರಂದು ಪೂರ್ಣಗೊಳಿಸುತ್ತಿದ್ದು, 139ನೇ ವರ್ಷಕ್ಕೆ ಕಾಲಿಡುತ್ತಿದೆ.

'ನಮ್ಮ ನಾಯಕರು ಮಾತೃಭೂಮಿಯ ಏಕತೆ ಮತ್ತು ಸಮಗ್ರತೆ ಬಲಪಡಿಸಲು ಹಾಗೂ ದೇಶವನ್ನು ಪರಕೀಯರ ದಬ್ಬಾಳಿಕೆಯಿಂದ ಭಾರತೀಯರಿಗೆ ಸ್ವಾತಂತ್ರಗಳಿಸಿ ಕೊಡಬೇಕೆಂಬ ಉದ್ದೇಶದಿಂದ ಕಾಂಗ್ರೆಸ್ ಪಕ್ಷವನ್ನು ರಚಿಸಿದರು.

ಬ್ರಿಟಿಷರಿಂದ ದೇಶವನ್ನು ಮುಕ್ತ ಮಾಡಲು ಅನೇಕ ಕಾಂಗ್ರೆಸ್ ನಾಯಕರು ತಮ್ಮ ಜೀವವನ್ನೇ ಬಲಿದಾನ ಮಾಡಿದ್ದಾರೆ ಎಂದು ಇದೇ ವೇಳೆ ಸ್ಮರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ವಿಠ್ಠಲ ಪರಸನ್ನವರ, ಕಲ್ಲಪ್ಪಾ ಗೌಡ ಲಕ್ಕಾರ, ಸುರೇಶ್ ಮುದ್ದಪ್ಪಗೋಳ, ಶಿವು ಕಿಲಾರಿ, ಇಮ್ರಾನ್ ಶಿವಾಪುರ, ರೆಹಮಾನ್ ಮುಕಾಶಿ, ರವಿ ನಾವಿ ಪ್ರವಿಣ ಗುಡ್ಡಾಕಾಯಿ, ಮಂಜುರ ಸಂಶಾರ, ಕಲಿಲ ಪಾಜನಿಗಾರ, ಬಸು ಕೊಳಕಿ, ಮಂಜು ಸನದಿ, ಕಲಗೌಡ ಪಾಟೀಲ, ಡಾ ವೃಷಬೇಂದ್ರ ಹಿರೇಮಠ, ಡಾ ಶಾಂತ ಪಿ, ಡಾ. ಉದಯ ಅಂಗಡಿ, ಮಾರುತಿ ವಿಜಯನಗರ ಸೇರಿದಂತೆ ಅನೇಕರು ಇದ್ದರು.

## ದಲಿತ ಯುವತಿ ವಿವಾಹವಾಗಿದ್ದಕ್ಕೆ ವರನ ಕುಟುಂಬಕ್ಕೆ ಬಹಿಷ್ಕಾರ



ಶಿವಮೊಗ್ಗ: ಜೋಗಿ ಸಮುದಾಯಕ್ಕೆ ಸೇರಿದ ವ್ಯಕ್ತಿಯೊಬ್ಬರು ದಲಿತ ಯುವತಿಯನ್ನು ವಿವಾಹವಾದ ಹಿನ್ನೆಲೆಯಲ್ಲಿ ಆತನ ಕುಟುಂಬಕ್ಕೆ ಅದೇ ಸಮುದಾಯದ ಕೆಲ ಮುಖಂಡರು ಸಾಮಾಜಿಕ ಬಹಿಷ್ಕಾರ ಹಾಕಿರುವ ಘಟನೆ ಶಿವಮೊಗ್ಗದಲ್ಲಿ ನಡೆದಿದೆ.

ಶಿವಮೊಗ್ಗದ ಕುಮ್ಸಿ ಹೋಬಳಿಯ ಹೊರಬೈಲು ಗ್ರಾಮದಲ್ಲಿ ಈ ಘಟನೆ ನಡೆದಿದೆ. ಜೋಗಿ ಸಮುದಾಯದ ಯುವಕ, ದಲಿತ ಸಮುದಾಯದ ಯುವತಿಯನ್ನು ವಿವಾಹವಾಗಿದ್ದಾನೆ. ಈ ಕಾರಣಕ್ಕೆ ಅಸಮಾಧಾನಗೊಂಡ ಸಮುದಾಯದ ಮುಖಂಡರು, ಸಮುದಾಯದ ಜನರನ್ನು ವ್ಯಕ್ತಿಯ ಕುಟುಂಬದೊಂದಿಗೆ ಮಾತನಾಡದಂತೆ ಸೂಚಿಸಿದ್ದಲ್ಲದೆ, ತಪ್ಪಿದರೆ 1,000 ರೂ, ದಂಡ ವಿಧಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಸೂಚನೆ ಪಾಲಿಸದವರ ಬಗ್ಗೆ ಮಾಹಿತಿ ನೀಡುವವರಿಗೆ 500 ರೂ, ಬಹುಮಾನ ನೀಡುವುದುದಾಗಿ ಹೇಳಿದ್ದಾರೆ ಎನ್ನಲಾಗಿದೆ.

ಈ ವಿಚಾರವಾಗಿ ವಧೂವರರು ದೂರು ದಾಖಲಿಸಿದ್ದಾರೆ. ಅಧಿಕಾರಿಗಳ ತಂಡ ಗ್ರಾಮಕ್ಕೆ ಭೇಟಿ ನೀಡಿ, ಕುಮ್ಸಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಹೊರಬೈಲು ಗ್ರಾಮದಲ್ಲಿ ಸುಮಾರು 80 ಮನೆಗಳಿದ್ದು, ಅದರಲ್ಲಿ 60 ಮನೆಗಳು ಜೋಗಿ ಸಮುದಾಯಕ್ಕೆ ಸೇರಿವೆ. ಜೋಗಿ ಸಮುದಾಯದ ಯುವಕ ಹಾಗೂ ದಲಿತ ಯುವತಿ ಪರಸ್ಪರ ಪ್ರೀತಿಸುತ್ತಿದ್ದು, ಸೆಪ್ಟೆಂಬರ್ 10 ರಂದು ಮದುವೆಯಾಗಿದ್ದರು. ಸೆಪ್ಟೆಂಬರ್ 27 ರಂದು ವಿವಾಹ ನೋಂದಣಿ ಮಾಡಿಕೊಂಡಿದ್ದರು. ಜೋಗಿ ಸಮುದಾಯದ ಕೆಲವರು ನಕಲಿ ಎಸ್‌ಸಿ ಪ್ರಮಾಣ ಪತ್ರ ಪಡೆದು ಸರ್ಕಾರದ ಸವಲತ್ತು, ಸೌಲಭ್ಯ ಪಡೆಯುತ್ತಿದ್ದಾರೆ. ಅವರು ಜೋಗಿ ಸಮುದಾಯಕ್ಕೆ ಎಸ್‌ಸಿ ಮಾನ್ಯತೆ ಹೊಂದಲು ಮತ್ತು ಸರ್ಕಾರದ ಸವಲತ್ತುಗಳನ್ನು ಪಡೆದುಕೊಳ್ಳಲು ಬಯಸುತ್ತಾರೆ. ಆದರೆ ಎಸ್‌ಸಿ ಸಮುದಾಯದ ಹುಡುಗಿಯನ್ನು ಸ್ವೀಕರಿಸಲು ಸಿದ್ಧರಿಲ್ಲ. ಇದು ಸ್ವೀಕಾರಾರ್ಹವಲ್ಲ' ಎಂದು ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಹಾಲೇಶಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಜನವರಿ 12ರಂದು ಯುವನಿಧಿ 5ನೇ ಗ್ಯಾರಂಟಿ ಯೋಜನೆ ಲೋಕಾರ್ಪಣೆ: ಸಚಿವ ಮಧು ಎಸ್.ಬಂಗಾರಪ್ಪ



ಶಿವಮೊಗ್ಗ: 2024ರ ಜನವರಿ 12ರಂದು ನಗರದ ಫ್ರೀಡಂ ಪಾರ್ಕ್ ಆವರಣದಲ್ಲಿ ಯುವನಿಧಿ ಸರ್ಕಾರದ 5ನೇ ಮಹತ್ವಾಕಾಂಕ್ಷಿ ಯೋಜನೆಯ ಅನುಷ್ಠಾನ ಕಾರ್ಯಕ್ರಮವನ್ನು ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಸೇರಿದಂತೆ ಸಚಿವ ಸಂಪುಟದ ಸದಸ್ಯರ ಉಪಸ್ಥಿತಿಯಲ್ಲಿ ಆಯೋಜಿಸಲಾಗಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್.ಬಂಗಾರಪ್ಪ ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಚುನಾವಣಾ ಪೂರ್ವದಲ್ಲಿ ಕೊಟ್ಟ ಮಾತಿನಂತೆ ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಮತ್ತು ಗೃಹಲಕ್ಷ್ಮೀ ಯೋಜನೆಗಳು ಈಗಾಗಲೇ ಅನುಷ್ಠಾನಗೊಳಿಸಲಾಗಿದ್ದು, 5ನೇ ಗ್ಯಾರಂಟಿ ಯೋಜನೆಯನ್ನು ಜನವರಿ 12ರಂದು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದವರು ನುಡಿದರು.

ಪ್ರಗತಿ ಎಂಬುದು ಒಂದು ನಿರಂತರ ಪ್ರಕ್ರಿಯೆ. ಈ ಹಾದಿಯಲ್ಲಿ ಯಾರೂ ಅವಕಾಶ ವಂಚಿತರಾಗಬಾರದು. ಸಮಾಜದ ಪ್ರತಿಯೊಬ್ಬರಿಗೂ ಪ್ರಗತಿಯ ಫಲಗಳು ದೊರೆಯಬೇಕು ಹಾಗೂ ಅಭಿವೃದ್ಧಿಯ ಪಾಲುದಾರರಾಗಬೇಕೆಂಬ ಆಶಯ ನಮ್ಮದಾಗಿದ್ದು, ಸಾಮಾಜಿಕ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಈ ಯೋಜನೆಗಳು ಸಫಲವಾಗಿವೆ ಎಂದರು.

ಯುವನಿಧಿ ಯೋಜನೆಯ ರಾಜ್ಯ ಮಟ್ಟದ ಅನುಷ್ಠಾನ ಕಾರ್ಯಕ್ರಮಕ್ಕೆ ಶಿವಮೊಗ್ಗ ಹಾಗೂ ನೆರೆಯ ಜಿಲ್ಲೆಗಳಿಂದ ಸುಮಾರು ಒಂದು ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯ ಜನರು ಸೇರುವ ನಿರೀಕ್ಷೆ ಇದೆ. ಇದರ ವ್ಯವಸ್ಥಿತ ಅನುಷ್ಠಾನ, ವೇದಿಕೆ ನಿರ್ಮಾಣ ಮತ್ತು ವಾಹನ ಸಂಚಾರ ದಟ್ಟಣ ನಿಯಂತ್ರಣಕ್ಕೆ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುವಂತೆ ಸಚಿವರು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಸೂಚಿಸಿದರು.

ಈ ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗಾಗಿ ಯಾವುದೇ ಅಡಚಣೆಗಳುಂಟಾಗದಂತೆ ಕ್ರಮ ವಹಿಸಬೇಕು. ವಾಹನ ನಿಲುಗಡೆಗೆ ಪ್ರತ್ಯೇಕ ವ್ಯವಸ್ಥೆ ಮತ್ತಿತರ ವಿಷಯಗಳ ಕುರಿತು ಸೂಕ್ಷ್ಮವಾಗಿ ಗಮನಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಅವರು, ವಿಶೇಷವಾಗಿ ಅನ್ನಭಾಗ್ಯ ಮತ್ತು ಗೃಹಲಕ್ಷ್ಮೀ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಕಾರಣಗಳಿಂದಾಗಿ ಅಲ್ಲಲ್ಲಿ ದೂರುಗಳು ಕೇಳಿ ಬರುತ್ತಿವೆ. ಇಂತಹ ಯಾವುದೇ ದೂರುಗಳು ಬಾರದಂತೆ, ಈ ಯೋಜನೆಯಡಿ ಸೌಲಭ್ಯ ಪಡೆಯದೇ ಬಾಕಿ ಉಳಿದಿರುವ ಅರ್ಹರನ್ನು ಗುರುತಿಸಿ, ಯೋಜನೆಯ ವ್ಯಾಪ್ತಿಗೊಳಪಡಿಸುವಲ್ಲಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯ ಅನೇಕ ಕಡೆಗಳಿಂದ ಹೆಚ್ಚುವರಿ ಬಸ್ಗಳಿಗಾಗಿ ಬೇಡಿಕೆ ಇದ್ದು, ಸುಮಾರು 250ಕ್ಕೂ ಹೆಚ್ಚಿನ ಅರ್ಜಿಗಳು ಸಲ್ಲಿಕೆಯಾಗಿವೆ. ಇವುಗಳನ್ನು ಹಂತಹಂತವಾಗಿ ಒದಗಿಸುವಲ್ಲಿ ವೈಯಕ್ತಿಕವಾಗಿ ಗಮನಹರಿಸಲಾಗುವುದು ಎಂದ ಅವರು ಅಗತ್ಯವಿರುವ ಬಸ್ಗಳಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸಾರಿಗೆ ನಿಗಮದ ಜಿಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

ಯುವನಿಧಿ ಯೋಜನೆಯಡಿ ಸೌಲಭ್ಯ ಪಡೆದುಕೊಳ್ಳಬಯಸುವ ನಿರುದ್ಯೋಗಿ ಯುವಕರು ತಮ್ಮ ಪ್ರಸ್ತಾವನೆಯನ್ನು ಇಂದಿನಿಂದಲೇ ಆನ್ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚು ಸಂಖ್ಯೆಯ ಅಭ್ಯರ್ಥಿಗಳು ಈ ಯೋಜನೆಯ ಲಾಭ ಪಡೆದುಕೊಳ್ಳುವಂತೆ ಅವರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ॥ ಆರ್.ಸೆಲ್ವಮಣಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಕೆ.ಮಿಥುನ್ಕುಮಾರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ನೇಹಲ್ ಸುಧಾಕರ್ ಲೋಖಂಡೆ, ಅಪರ ಜಿಲ್ಲಾಧಿಕಾರಿ ಸಿದ್ದಲಿಂಗರೆಡ್ಡಿ ಅವರು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಿ.29 ರಿಂದ ಇಂಚಲ ಡಾ. ಶಿವಾನಂದ ಭಾರತಿ ಸ್ವಾಮೀಜಿ 84 ನೇ ಜಯಂತ್ಯೋತ್ಸವ ಕಾರ್ಯಕ್ರಮ

ಬೈಲಹೊಂಗಲ: ಸಮೀಪದ ಸುಕ್ಷೇತ್ರ ಇಂಚಲ ಗ್ರಾಮದ ಶಿವಯೋಗೀಶ್ವರ ಸಾಧು ಸಂಸ್ಥಾನಮಠದ ಪೀಠಾಧಿಪತಿ ಡಾ.ಶಿವಾನಂದ ಭಾರತಿ ಮಹಾಸ್ವಾಮೀಜಿಗಳವರ 84ನೇ ಜಯಂತ್ಯೋತ್ಸವ ಹಾಗೂ ವಿಶ್ವಶಾಂತಿಗಾಗಿ 54 ನೇ ಅಖಿಲ ಭಾರತ ವೇದಾಂತ್ ಪರಿಷತ್, ರಜತ ರಥೋತ್ಸವ ಹಾಗೂ ಮಹಾರಥೋತ್ಸವ ಕಾರ್ಯಕ್ರಮ ಡಿ.29ರಿಂದ ಜ.2ರವರೆಗೆ ಡಾ.ಶಿವಾನಂದ ಭಾರತಿ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಐದು ದಿನಗಳ ಕಾಲ ಅದ್ದೂರಿಯಾಗಿ ನಡೆಯಲಿದೆ.

ಪ್ರತಿದಿನ ಬೆಳಿಗ್ಗೆ 5 ಕ್ಕೆ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, 6.30ರಿಂದ 7.30ರವರೆಗೆ ಮಹಾತ್ಮರಿಂದ ಶ್ರೀ ಮದ್ಭಗವದ್ಗೀತಾ ಪಾರಾಯಣ, 8.30ರಿಂದ 9.30ರವರೆಗೆ ಸಂಗೀತ ಸೇವೆ, 9.30ರಿಂದ 12.30ರವರೆಗೆ ಮಹಾತ್ಮರಿಂದ ಆಧ್ಯಾತ್ಮ ಪ್ರವಚನ, ಸಂಜೆ 5.30 ರಿಂದ 6.30ರವರೆಗೆ ಸಂಗೀತ ಸೇವೆ, 6.30ರಿಂದ 9.30ರವರೆಗೆ ಆಧ್ಯಾತ್ಮಕ ಪ್ರವಚನ, 9.30ಇಂದ 10.30ರವರೆಗೆ ಶ್ರೀಗಳ ತುಲಾಭಾರ, ಮಹಾಪೂಜೆ ನಡೆಯಲಿದೆ.

ಡಿ.29ರಂದು ಬೆಳಿಗ್ಗೆ 7ಕ್ಕೆ ಹಂಪಿಯ ಹೇಮ ಕೂಟದ ಶಿವರಾಮಾವಧೂತಾಶ್ರಮದ ವಿದ್ಯಾನಂದ ಭಾರತಿ ಸ್ವಾಮೀಜಿ ಅವರಿಂದ ಪ್ರಣವ ಧ್ವಜಾರೋಹಣ ನಂತರ ಕಳಸ ಸ್ಥಾಪನೆ ನಡೆಯಲಿದ್ದು, ಬೆಳಿಗ್ಗೆ 9.30ಕ್ಕೆ ಅಹಮೇವಂ ವಿಥೋರ್ಜುನ ವಿಷಯ ಕುರಿತು ಪ್ರವಚನ ನಡೆಯಲಿದೆ. ಹಂಪಿ ಹೇಮಕೂಟದ ವಿದ್ಯಾನಂದ ಭಾರತಿ ಸ್ವಾಮಿಜಿ, ಹುಬ್ಬಳ್ಳಿ ಜಡಿಸಿದ್ಧಯೋಗೀಂದ್ರ ಮಠದ ರಾಮಾನಂದ ಭಾರತಿ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ಇಂಚಲದ ಪೂರ್ಣಾನಂದ ಭಾರತಿ ಸ್ವಾಮೀಜಿ. ಸಚ್ಚಿದಾನಂದ ಸ್ವಾಮಿಜಿ, ಮಾತಾ ಅನಸೂಯಾ ತಾಯಿ, ಶಿವದೇವಿತಾಯಿ ಅತಿಥಿಗಳಾಗಿ ಆಗಮಿಸುವರು.

ಸಂಜೆ 6.30ಕ್ಕೆ ಸುಧಾರಸ ಧಾರೆ ಯಾವುದು ಮಿಗೆ ಮೃದುವಚನ ವಿಷಯದ ಕುರಿತು ಪ್ರವಚನ ನಡೆಯಲಿದೆ. ಕುಳ್ಳೂರು–ಯಡಳ್ಳಿಯ ಶಿವಯೋಗೀಶ್ವರ ಮಠದ ಬಸವಾನಂದ ಭಾರತಿ ಸ್ವಾಮೀಜಿ ನೇತೃತ್ವವಹಿಸುವರು. ಖುರ್ದಕೆಂಚನಹಳ್ಳಿಯ ಸುಬ್ರಮಣ್ಯ ಸ್ವಾಮೀಜಿ ಅಧ್ಯಕ್ಷವಹಿಸಲಿದ್ದಾರೆ. ಅತಿಥಿಗಳಾಗಿ ವಿವಿಧ ಮಠಾಧೀಶರು, ಗಣ್ಯರು ಆಗಮಿಸಲಿದ್ದಾರೆ.

ಡಿ.30ರಂದು ಬೆಳಗ್ಗೆ 9.30ಕ್ಕೆ ಯಜ್ಞದಾನ ತಪ, ಕರ್ಮಪಾವನಾನಿ ಮನಿಷಿಣಾಮ್ ವಿಷಯದ ಕುರಿತು ನಡೆಯಲಿರುವ ಪ್ರವಚನದಲ್ಲಿ ಹುಬ್ಬಳ್ಳಿ ಶಾಂತಾಶ್ರಮದ ಅಭಿನವ ಸಿದ್ಧಾರೂಢ ಸ್ವಾಮೀಜಿ ನೇತೃತ್ವ, ಹರಳಗಟ್ಟಿ ಶಿವಾನಂದ ಬ್ರಹ್ಮ ವಿದ್ಯಾಶ್ರಮದ ನಿಜಗುಣ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ಸಂಜೆ 6.30ಕ್ಕೆ ಕ್ಷಣಮಪಿ ಸಜ್ಜನ ಸಂಗತಿರೇಖಾ ಭವತಿ ಭವಾರ್ಣವ ತರಣೆನೌಕಾ ವಿಷಯದ ಪ್ರವಚನದಲ್ಲಿ ನಿಡಸೋಸಿ ಸಿದ್ಧಸಂಸ್ಥಾನ ಮಠದ ಜಗದ್ಗುರು ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ ನೇತೃತ್ವವಹಿಸಲಿದ್ದು, ಹುಕ್ಕೇರಿಯ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ವಿವಿಧ ಮಠಾಧೀಶರು, ಗಣ್ಯರು ಆಗಮಿಸಲಿದ್ದಾರೆ. ಇದೇ ವೇಳೆ ಗಣ್ಯರಿಗೆ ಸತ್ಕಾರ ಸಮಾರಂಭ





ನಡೆಯಲಿದೆ.

ಡಿ.31 ರಂದು ಬೆಳಗ್ಗೆ 3.30ಕ್ಕೆ ಕರುಣವಿದ್ಯೆಗಳುಳ್ಳ ಗುರುಭಜನೆಯನು ವಿಷಯದ ಪ್ರವಚನದಲ್ಲಿ ಬಿದರ ಚಿದಂಬರ ಸಿದ್ಧಾರೂಢಾಶ್ರಮದ ಭೂಷಣ ಶಿವಕುಮಾರೇಶ್ವರ ಸ್ವಾಮೀಜಿ ನೇತೃತ್ವವಹಿಸಲಿದ್ದು, ಹುಬ್ಬಳ್ಳಿಯ ರಾಮಾನಂದ ಭಾರತಿ ಸ್ವಾಮೀಜಿ ಅಧ್ಯಕ್ಷತೆವಹಿಸಲಿದ್ದಾರೆ. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ಸಂಜೆ 6.30ಕ್ಕೆ ಹಿತವಾವುದಿಹಪರದೊಳು ಮರ್ರತಿ ವಿಷಯದ ಪ್ರವಚನದಲ್ಲಿ ಬಿದರದ ಭೂಷಣ ಶಿವಕುಮಾರೇಶ್ವರ ಸ್ವಾಮೀಜಿ ನೇತೃತ್ವವಹಿಸಲಿದ್ದು, ಮುರಗೋಡದ ನೀಲಕಂಠ ಸ್ವಾಮೀಜಿ, ಶಾಖಾ ಮೂರುಸಾವಿರಮಠದ ಪ್ರಭುನೀಲಕಂಠ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ಜ.1 ರಂದು ಬೆಳಗ್ಗೆ 9.30ಕ್ಕೆ ಮಾಡಲಿಲ್ಲವೇ ತಪವನು ವಿಷಯ ಕುರಿತು ಬಿದರದ ಭೂಷಣ ಶಿವಕುಮಾರೇಶ್ವರ ಸ್ವಾಮೀಜಿ ನೇತೃತ್ವವಹಿಸಲಿದ್ದು, ಹಂಪಿಯ ವಿದ್ಯಾನಂದ ಭಾರತಿ ಸ್ವಾಮೀಜಿ, ಶೇಗುಣಸಿಯ ಮಹಾಂತ ದೇವರು ಅಧ್ಯಕ್ಷತೆವಹಿಸಲಿದ್ದಾರೆ. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ಸಂಜೆ 6.30 ಕ್ಕೆ ತೇಷಾಮಹಂ ಸಮುದ್ಧರ್ತಾಮೃತ್ಯುಸಂಸಾರ ಸಾಗರಾತ್ ವಿಷಯದ ಪ್ರವಚನದಲ್ಲಿ ಬಿದರದ ಭೂಷಣ ಶಿವಕುಮಾರೇಶ್ವರ ಸ್ವಾಮೀಜಿ ನೇತೃತ್ವವಹಿಸಲಿದ್ದು, ಯಡಳ್ಳಿಯ ಬಸವಾನಂದ ಭಾರತಿ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ರಾತ್ರಿ 9ಕ್ಕೆ ಶ್ರೀಗಳವರ 84ನೇ ಜಯಂತೋತ್ಸವ ನಿಮಿತ್ತ ತೊಟ್ಟಿಲೋತ್ಸವ ಕಾರ್ಯಕ್ರಮ ನಂತರ ಸರ್ವ ಪೂಜ್ಯರ ಸಮ್ಮುಖದಲ್ಲಿ ಡಾ.ಶಿವಾನಂದ ಭಾರತಿ ಸ್ವಾಮೀಜಿಗಳವರ ಸುವರ್ಣ ಸಿಂಹಾಸನಾರೋಹಣ ಮತ್ತು ಕನಕ ಕರೀಟಧಾರಣೆ, ಶ್ರೀಗಳ ಮಹಾಪೂಜೆ ಹಾಗೂ ಮಹಾಮಂಗಲ ಕಾರ್ಯಕ್ರಮ ನಡೆಯಲಿದೆ.

ಜ.2 ರಂದು ಬೆಳಗ್ಗೆ 9.30ಕ್ಕೆ ಹರನಾಮವನ್ನು ಬಿಡದೆ ಜಪಿಸಬಲ್ಲವರ ವಿಷಯದ ಪ್ರವಚನದಲ್ಲಿ ಹಂಪಿಯ ವಿದ್ಯಾನಂದ ಭಾರತಿ ಸ್ವಾಮೀಜಿ ನೇತೃತ್ವವಹಿಸುವರು. ಯಡಳ್ಳಿಯ ಬಸವಾನಂದ ಭಾರತಿ ಸ್ವಾಮೀಜಿ ಅಧ್ಯಕ್ಷತೆವಹಿಸುವರು. ಅತಿಥಿಗಳಾಗಿ ವಿವಿಧ ಮಠಾಧೀಶರು ಆಗಮಿಸಲಿದ್ದಾರೆ.

ಮಧ್ಯಾಹ್ನ 11ಕ್ಕೆ ಸರ್ವಧರ್ಮ ಸಾಮೂಹಿಕ ವಿವಾಹಗಳು ನಡೆಯಲಿವೆ. ಡಾ.ಶಿವಾನಂದ ಭಾರತಿ ಸ್ವಾಮೀಜಿ ಸಾನಿಧ್ಯವಹಿಸುವರು. ಶಾಸಕರಾದ ಮಹಾಂತೇಶ ಕೌಜಲಗಿ, ಬಾಬಾಸಾಹೇಬ ಪಾಟೀಲ, ಮಾಜಿ ಶಾಸಕರಾದ ಮಹಾಂತೇಶ ದೊಡಗೌಡರ, ಜಗದೀಶ ಮೆಟಗುಡ್ಡ, ಡಾ.ವಿಶ್ವನಾಥ ಪಾಟೀಲ ಅತಿಥಿಗಳಾಗಿ ಆಗಮಿಸುವರು. ಮಧ್ಯಾಹ್ನ 2ಕ್ಕೆ ಶ್ರೀಗಳ ಪಲ್ಲಕ್ಕಿ ಉತ್ಸವ, ಸಂಜೆ 4.30 ಕ್ಕೆ ಶ್ರೀಗಳ ರಜತ ಮಹೋತ್ಸವ, ಸಂಜೆ 5ಕ್ಕೆ ಶ್ರೀ ಶಿವಯೋಗೀಶ್ವರ ಮಹಾ ರಥೋತ್ಸವ ಜರುಗುವುದು. ಪ್ರತಿದಿನ ಸಂಜೆ 4ರಿಂದ 6ರವರೆಗೆ ಶಿವಾನಂದ ಭಾರತಿ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿ–ವಿದ್ಯಾರ್ಥಿನೀಯರಿಂದ ಮನರಂಜನಾ ಕಾರ್ಯಕ್ರಮ, ಜ.1ರಂದು ರಾತ್ರಿ 10ಕ್ಕೆ ರಾಜ್ಯ ಪ್ರಶಸ್ತಿ ವಿಜೇತೆ ಮಲ್ಲವ್ವ ಮ್ಯಾಗೇರಿ ಹಾಗೂ ಸಂಗಡಿಗರಿಂದ ಶ್ರೀಕೃಷ್ಣ ಪಾರಿಜಾತ ನಡೆಯಲಿದೆ. ಪ್ರತಿದಿನ ನಡೆಯುವ ಪ್ರವಚನದಲ್ಲಿ ಗಣ್ಯರಿಗೆ ಸತ್ಕಾರ ನಡೆಯಲಿದ್ದು, ಸಹಸ್ರಾರು ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸುಕ್ಷೇತ್ರ ಇಂಚಲ ಸಂಸ್ಥೆಯ ಆಡಳಿತಾಧಿಕಾರಿ ಪೂರ್ಣಾನಂದ ಭಾರತಿ ಸ್ವಾಮೀಜಿ ತಿಳಿಸಿದ್ದಾರೆ.

# ಹಿರಿಯರ ಸೇವೆಯ ಮೂಲಕ ದೇವರ ಸೇವೆ ಮಾಡೋಣ: ಸಚಿವೆ ಲಕ್ಷ್ಮೀ ಹೆಬ್ಬಾಳಕರ




ಬೆಳಗಾವಿ : ಹಿರಿಯ ನಾಗರಿಕರೇ ನಮಗೆ ಕಣ್ಣಿಗೆ ಕಾಣುವ ದೇವರು. ಅವರ ಸೇವೆ ಮಾಡುವ ಮೂಲಕ ದೇವರ ಸೇವೆ ಮಾಡೋಣ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಇಲ್ಲಿಯ ಕಿಣಿಯೆಯಲ್ಲಿರುವ ಶಾಂತಾಯಿ ವೃದ್ದಾಶ್ರಮದಲ್ಲಿ ಗುರುವಾರ ಪ್ರಾರ್ಥನಾ ಮಂದಿರ ಉದ್ಘಾಟಿಸಿ ಅವರು ಮಾತನಾಡಿದರು. ಸಮಾಜದ ದುರ್ಬಲರೆಂದು ಗುರುತಿಸಲ್ಪಟ್ಟಿರುವ ಹಿರಿಯ ನಾಗರಿಕರು, ವಿಕಲಚೇತನರು, ಮಹಿಳೆಯರು ಮತ್ತು ಮಕ್ಕಳ ಸೇವೆ ಮಾಡುವ ಸೌಭಾಗ್ಯ ನನಗೆ ಸಿಕ್ಕಿದೆ. ಈ ಅವಕಾಶವನ್ನು ಬಳಸಿಕೊಂಡು ನನ್ನ ಅವಧಿಯಲ್ಲಿ ಏನನ್ನಾದರೂ ಸಾಧಿಸಬೇಕೆನ್ನುವ ಕನಸು ಹೊತ್ತಿದ್ದೇನೆ. ನಮ್ಮನ್ನು ದುರ್ಬಲರ ಸೇವೆಯಲ್ಲಿ ತೊಡಗಿಸಿಕೊಂಡಾಗ ಅದರಿಂದ ಸಿಗುವ ಆತ್ಮತೃಪ್ತಿ ಬೇರೆಲ್ಲೂ ಸಿಗಲು ಸಾಧ್ಯವಿಲ್ಲ ಎಂದು ಸಚಿವರು ತಿಳಿಸಿದರು.

ಆಶ್ರಮದ ರಸ್ತೆ ಅಭಿವೃದ್ಧಿ ಭರವಸೆ ನೀಡಿದ ಲಕ್ಷ್ಮೀ ಹೆಬ್ಬಾಳಕರ್, ಸರಕಾರದಿಂದ ಸಿಗುವ ಎಲ್ಲ ಸೌಲಭ್ಯಗಳನ್ನು ಒದಗಿಸುವುದಾಗಿ ತಿಳಿಸಿದರು. ಕಳೆದ 25 ವರ್ಷದಿಂದ ಶಾಂತಾಯಿ ವೃದ್ದಾಶ್ರಮ ನಿರಂತರ ಸೇವೆಯಲ್ಲಿ ತೊಡಗಿಕೊಂಡಿದೆ. ವಿಜಯ ಮೋರೆ ಮತ್ತು ಇಲ್ಲಿನ ಎಲ್ಲ ಪದಾಧಿಕಾರಿಗಳಿಗೆ ನಾನು ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಅವರೆಲ್ಲರ ಕುಟುಂಬಕ್ಕೆ ದೇವರ ಆಶೀರ್ವಾದ ಖಂಡಿತ ಇರುತ್ತದೆ ಎಂದು ಹೆಬ್ಬಾಳಕರ್ ಹೇಳಿದರು.

ಇದೇ ವೇಳೆ ವೃದ್ದಾಶ್ರಮದ ಮಹಿಳೆಯರು ಸಚಿವರನ್ನು ಸತ್ಕರಿಸಿದರು.

ವೃದ್ದಾಶ್ರಮದ ಅಧ್ಯಕ್ಷ ವಿಜಯ ಪಾಟೀಲ, ಕಾರ್ಯಾಧ್ಯಕ್ಷ ವಿಜಯ ಮೋರೆ, ಜಯಂತ ಹುಂಬರವಾಡಿ, ಸಮೀರ ಕಣಬರ್ಗಿ, ಕೀತ್ ಮಚಾಡೊ, ದಿಲೀಪ್ ಚಿಟ್ನಿಸ್, ಸಿದ್ಧಾರೂಢ ಹುಂದ್ರೆ, ಆನಂದ ದೇಸಾಯಿ, ಪ್ರವೀಣ್ ದೊಡ್ಡಣ್ಣನವರ್, ವಿಶ್ವನಾಥ್ ಕೆ ಸಾಮಂತ್, ರಾಜೇಂದ್ರ ಹರಕುಣಿ, ನಿಲೇಶ್ ಕೋಚಾ, ಬಸವನಗೌಡ ಪಾಟೀಲ, ಯುವರಾಜ್ ಕದಂ, ಬಾಮನವಾಡಿ ಗ್ರಾಮ ಪಂಚಾಯಿತಿ ಸದಸ್ಯರಾದ ಶಂಕುಂತಲಾ ಎಸ್ ಹಣಬರ, ಪ್ರಿಯಾಂಕಾ ಪಿ ಪಾಟೀಲ್, ವರ್ಷಾ ದುಕಾರೆ ಮೊದಲಾದವರು ಇದ್ದರು. ಅಲನ್ ಮೋರೆ ವಂದಿಸಿದರು.

# ವಿಶ್ವ ಗ್ರಾಹಕರ ದಿನಾಚರಣೆ

## ವಸ್ತುಗಳ ಖರೀದಿಗೆ ಗ್ರಾಹಕರು ಜಾಗೃತಿ ವಹಿಸಿ: ಹಿರಿಯ ಸಿವಿಲ್ ನ್ಯಾಯಾಧೀಶ ಪಿ.ಮುರಳೀಮೋಹನ್ ರೆಡ್ಡಿ

ಬೆಳಗಾವಿ: ಇತ್ತೀಚಿನ ದಿನಗಳಲ್ಲಿ ವಿದ್ಯಾವಂತ ಯುವಕರುನ್ನು ಸಹ ಹಾದಿ ತಪ್ಪಿಸುವ ಜಾಹೀರಾತುಗಳನ್ನು ಬರುತ್ತಿವೆ ಅನೇಕರು ಅಂತಹ ಜಾಹೀರಾತುಗಳನ್ನು ನಂಬಿ ಸಮಸ್ಯೆ ಎದುರಿಸುತ್ತಿದ್ದಾರೆ. ಗ್ರಾಹಕರು ಇಂತಹ ಜಾಲಗಳಿಗೆ ಬಲಿಯಾಗದೆ ಜಾಗೃತ ವಹಿಸಿ ವಸ್ತುಗಳನ್ನು ಖರೀದಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪಿ.ಮುರಳೀಮೋಹನ್ ರೆಡ್ಡಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ಆಯೋಗ ಕಾನೂನು ಮಾಪನ ಶಾಸ್ತ್ರ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆಹಾರ ಸುರಕ್ಷತೆ ಗುಣಮಟ್ಟ ಇಲಾಖೆ, ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ ( ಡಿ.ಸಿ.ಐ.ಸಿ) ಹಾಗೂ ಇತರ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಗುರುವಾರ (ಡಿ.28) ಏರ್ಪಡಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ದೇಶದಲ್ಲಿ ಯಾವುದೇ ಕಂಪನಿ ವಸ್ತುಗಳನ್ನು ಉಚಿತವಾಗಿ ಕೊಡುವುದಿಲ್ಲ, ಆದ್ದರಿಂದ ಯಾವುದೇ ಜಾಹೀರಾತು, ಹಾಗೂ ಅಪರಿಚಿತ ಲಿಂಕ್ ಗಳ ಮೂಲಕ ವಸ್ತುಗಳನ್ನು ಖರೀದಿಸಿದೆ ಅದರ ಸಂಪೂರ್ಣ ಮಾಹಿತಿ ತಿಳಿದು ನಂತರ ಅಗತ್ಯ ವಸ್ತುಗಳನ್ನು ಖರೀದಿಸಬೇಕು ಎಂದು ಪಿ.ಮುರಳೀಮೋಹನ್ ರೆಡ್ಡಿ ಅವರು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಸುನಂದ ಎಸ್. ಕಾದ್ರೊಳ್ಳಿಮಠ ಅವರು ಮಾತನಾಡಿ ಗ್ರಾಹಕರು ಯಾವುದೇ ವಸ್ತು ಖರೀದಿಸುವ ಮುನ್ನ ಅದರ ಗುಣಮಟ್ಟ, ಯೋಗ್ಯ ಬೆಲೆ ಕೂಲಂಹಕುಷವಾಗಿ ಪರೀಕ್ಷಿಸಿ ಖರೀದಿಸಬೇಕು ಜೊತೆಗೆ ಕಡ್ಡಾಯವಾಗಿ ರಶೀದಿ (ಬಿಲ್) ಪಡೆದುಕೊಳ್ಳಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿಶೇಷ ಉಪನ್ಯಾಸ ನೀಡಿದ ಬೆಳಗಾವಿ ಜಿಲ್ಲಾ ಗ್ರಾಹಕರ ಸಂಘದ ಅಧ್ಯಕ್ಷರು ಹಾಗೂ ನ್ಯಾಯವಾದಿಗಳಾದ ಎನ್. ಆರ್ ಲಾತೂರ ಅವರು

ಇ- ಕಾಮರ್ಸ್ ಮತ್ತು ಡಿಜಿಟಲ್ ಯುಗದಲ್ಲಿ ಆನಲೈನ್ ವ್ಯವಹಾರದಿಂದ ಸಮಯ ಉಳಿತಾಯ ಮಾಡುವ ಭರದಲ್ಲಿ ಹೆಚ್ಚಿನ ಸಮಸ್ಯೆಗಳಿಗೆ ಸಿಲುಕಿ ಗ್ರಾಹಕರು ಆರ್ಥಿಕ ನಷ್ಟಕ್ಕೆ ಅನುಭವಿಸಿ ಪ್ರಾಣ ಕಳೆದುಕೊಂಡಿರುವ ಉದಾಹರಣೆಗಳಿವೆ. ಆದ್ದರಿಂದ ಗ್ರಾಹಕರು ವಸ್ತು ಖರೀದಿಸುವಾಗ ಹೆಚ್ಚಿನ ಗಮನ ಹರಿಸುವುದು ಅವಶ್ಯಕ ಎಂದು ತಿಳಿಸಿದರು.

**ಗ್ರಾಹಕರ ಹಕ್ಕುಗಳ ಕರಪತ್ರ ಬಿಡುಗಡೆ:**

ಗ್ರಾಹಕರ ಹಕ್ಕು ಮತ್ತು ಜವಾಬ್ದಾರಿಗಳನ್ನು ಕುರಿತು ಕರಪತ್ರಗಳನ್ನು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಸುನಂದ ಎಸ್. ಕಾದ್ರೊಳ್ಳಿಮಠ ಅವರು ಬಿಡುಗಡೆ ಮಾಡಿದರು.

ಹೆಚ್ಚುವರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಗಿರೀಶ್ ಪಾಟೀಲ, ಬೆಳಗಾವಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಮೋಹನಕುಮಾರ ಹಂಚಾಟೆ, ಜಿಲ್ಲಾ ಗ್ರಾಹಕ ರಕ್ಷಣಾ ಪರಿಷತ್ ಸದಸ್ಯರಾದ ಪೂರ್ಣಿಮಾ ಪಟ್ಟಣಶೆಟ್ಟಿ, ಅಂಗಡಿ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿ ಎಂ.ಬಿ.ಎ ವಿಭಾಗದ ನಿರ್ದೇಶಕರಾದ ಡಾ. ಸೂರ್ಯಕುಮಾರ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯಹಾರಗಳ ಇಲಾಖೆ ಜಂಟಿ ನಿರ್ದೇಶಕರಾದ ಶ್ರೀಶೈಲ ಕಂಕಣವಾಡಿ, ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಮಂಜುನಾಥ, ಕಾನೂನು ಮಾಪನ ಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕರಾದ ಆರ್. ಐ ಬಿಸಗುಪ್ಪಿ, ಮಹಿಳಾ ಕಲ್ಯಾಣ ಸಂಸ್ಥೆ ಜಿಲ್ಲಾ ಗ್ರಾಹಕ ಮಾಹಿತಿ ಕೇಂದ್ರ ಗೌರವ ಕಾರ್ಯದರ್ಶಿಯಾದ ವೈಜಯಂತಿ ಚೌಗಲಾ ಉಪಸ್ಥಿತರಿದ್ದರು.

# ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸ್ ಮಾನ್ಯತಾ ಅವಧಿ ವಿಸ್ತರಣೆ

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ಬಸ್ ಪಾಸ್ ಕೋರಿ ಅರ್ಜಿ ಸಲ್ಲಿಸುವ ವಿಕಲಚೇತನ ಫಲಾನುಭವಿಗಳಿಗೆ 2024 ನೇ ಸಾಲಿನ ಜನವರಿ 01, 2024 ರಿಂದ ಡಿ.31 2024 ರವರೆಗೆ ಮಾನ್ಯತೆ ಇರುವಂತೆ ರಿಯಾಯಿತಿ ದರದ ಬಸ್ ಪಾಸ್‌ಗಳನ್ನು ವಿತರಿಸುತ್ತಿದೆ.

ವಿಕಲಚೇತನರ ರಿಯಾಯತಿ ಬಸ್ ಪಾಸ್‌ಗಳನ್ನು ಫಲಾನುಭವಿಗಳಿಗೆ ಸೇವಾಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ, ನವೀಕರಿಸಿಕೊಳ್ಳಲು ಅನುಕೂಲವಾಗಲು 2023 ನೇ ಸಾಲಿನಲ್ಲಿ ವಿತರಿಸಲಾಗಿರುವ ಮತ್ತು ಡಿ.31 2023 ರವರೆಗೆ ಮಾನ್ಯತೆ ಇರುವ ವಿಕಲಚೇತನರ ಬಸ್ ಪಾಸ್‌ಗಳನ್ನು ಫೆಬ್ರುವರಿ 29, 2024 ರವರೆಗೆ ಮಾನ್ಯ ಮಾಡಿ ಅವಕಾಶ ಕಲ್ಪಿಸಲಾಗಿದೆ..

2024ನೇ ಸಾಲಿನ ವಿಕಲಚೇತನರ ಹೊಸ ಬಸ್ ಪಾಸುಗಳನ್ನು ವಿತರಿಸಲು ಹಾಗೂ ಹಳೆಯ ಪಾಸ್‌ಗಳನ್ನು ನವೀಕರಿಸಲು ಶೀಘ್ರದಲ್ಲಿಯೇ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

2024 ನೇ ಸಾಲಿನ ಪಾಸುಗಳ ನವೀಕರಣ ಮತ್ತು ನೂತನ ಪಾಸುಗಳಿಗೆ, ರೂ:660/– ಶುಲ್ಕ ನಿಗದಿಪಡಿಸಲಾಗಿದೆ. ಇದನ್ನು ನಗದಾಗಿ ಅಥವಾ ಡಿ.ಡಿ ರೂಪದಲ್ಲಿ ಪಾವತಿಸಿಕೊಳ್ಳಲಾಗುವುದು.

ಫೆ.29 2024 ರ ನಂತರ ನವೀಕರಣಕ್ಕಾಗಿ ಬರುವ ಫಲಾನುಭವಿಗಳಿಗೆ ನೂತನ ಪಾಸು ಮಾದರಿಯಲ್ಲಿ ಅಗತ್ಯ ದಾಖಲಾತಿಗಳನ್ನು ಪಡೆದು ಪಾಸ್ ವಿತರಿಸಲಾಗುವುದು. ನೂತನ ಪಾಸು ವಿತರಣೆಗೆ ನಿರ್ದಿಷ್ಟ ಕಾಲಮಿತಿ ಇರುವುದಿಲ್ಲ.

2024 ನೇ ಸಾಲಿನ ವಿಕಲಚೇತನರ ಬಸ್ ಪಾಸ್ ವಿತರಣೆ/ನವೀಕರಣಕ್ಕೆ ಸೇವಾಸಿಂಧು ಪೋರ್ಟಲ್‌ನಲ್ಲಿ ದಾಖಲಿಸಲು ಕ್ರಮ ಕೈಗೊಳ್ಳಲಾಗಿದ್ದು, ಫಲಾನುಭವಿಗಳು ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮುಖ್ಯ ಸಂಚಾರ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಲಾಶಯಗಳಲ್ಲಿ ನೀರಿನ ಪ್ರಮಾಣ ಕಡಿಮೆ: ಸಾರ್ವಜನಿಕರು ಮಿತವಾಗಿ ಬಳಸಲು ಕೋರಿಕೆ

ಬೆಳಗಾವಿ: ಬೆಳಗಾವಿ ನಗರಕ್ಕೆ ನೀರು ಸರಬರಾಜು ಮಾಡುವ ಹಿಡಕಲ್ ಜಲಾಶಯ ಹಾಗೂ ರಕ್ಕಸಕೊಪ್ಪದಲ್ಲಿ ನೀರಿನ ಸಂಗ್ರಹದ ಪ್ರಮಾಣ ಮಳೆ ಇಲ್ಲದೆ ಕೊರತೆಯಾಗಿ ದಿನನಿತ್ಯದ ನೀರಿನ ಮಟ್ಟ ಇಳಿಕೆಯಾಗುತ್ತಿರುವುದರಿಂದ ಬೇಸಿಗೆ ಕಾಲದಲ್ಲಿ ನೀರನ್ನು ಬೇಡಿಕೆಗೆ ಅನುಗುಣವಾಗಿ ಪೂರೈಸಲು ತೊಂದರೆಯಾಗಬಹುದಾಗಿದೆ.

ನೀರು ಅಮೃತವಾದ ಸಂಪನ್ಮೂಲ. ಅಗತ್ಯಕ್ಕೆ ಅನಗುಣವಾಗಿ ನೀರನ್ನು ನ್ಯಾಯೋಚಿತವಾಗಿ ಬಳಕೆ ಮಾಡುವ ಜವಾಬ್ದಾರಿ ಎಲ್ಲ ನಾಗರಿಕರದ್ದಾಗಿದೆ.

ಆದಕಾರಣ ಸಾರ್ವಜನಿಕರು ಈಗಿನಿಂದಲೇ ಮಿತವಾಗಿ ನೀರನ್ನು ಬಳಸಿ, ನೀರನ್ನು ಪೋಲು ಮಾಡದಿರಿ. ಬರುವ ಬೇಸಿಗೆಯನ್ನು ಎದುರಿಸಲು ಮಹಾನಗರ ಪಾಲಿಕಗೆ ಸಹಕರಿಸಿ ಎಂದು ಮಹಾನಗರ ಪಾಲಿಕೆಯ ಪರವಾಗಿ ಕೆಯುಐಡಿಎಫ್‌ಸಿ ಅಧೀಕ್ಷಕ ಅಭಿಯಂತರರಾದ ಅಶೋಕ ಬುರಕುಲೆರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರಿಧಾನ್ಯ ಸೇವನೆಯಿಂದ ಆರೋಗ್ಯ ವೃದ್ಧಿ: ಡಾ. ನಂದಾ ಹುಲ್ಲೊಳ್ಳಿ

ಬೆಳಗಾವಿ: ಸಿರಿ ಧಾನ್ಯಗಳಲ್ಲಿ ಪೌಷ್ಟಿಕಾಂಶಗಳ ಭಂಡಾರವೇ ಅಡಗಿದ್ದು, ಮನುಷ್ಯನ ಆರೋಗ್ಯ ವೃದ್ಧಿಗೆ ಸಿರಿ ಧಾನ್ಯಗಳ ಆಹಾರ ವರದಾನವಾಗಿದೆ ಎಂದು ಡಾ. ನಂದಾ ಹುಲ್ಲೊಳ್ಳಿ ಹೇಳಿದರು.

ಇಲ್ಲಿನ ಶಿವಬಸವನಗರ ಲಿಂಗಾಯತ ಭವನದಲ್ಲಿ ಲಿಂಗಾಯತ ಮಹಿಳಾ ಸಮಾಜದಿಂದ ಆಯೋಜಿಸಿದ ಆರೋಗ್ಯ ಆಸ್ವಾದ ಹಾಗು ಗೊಂಜಾಳದಿಂದ ಖಾರದ ಪದಾರ್ಥ, ಬೆಲ್ಲದ ಹೋಳಿಗೆ ತಯಾರಿಕೆ ಸ್ಪರ್ಧಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ಯುವ ಪೀಳಿಗೆಗೆ ಈ ಆರೋಗ್ಯ ಭರಿತ ಸಿರಿಧಾನ್ಯಗಳ ಅರಿವು ಕೂಡ ಕಡಿಮೆ ಆಗುತ್ತಾ ಹೋಗುತ್ತಿದೆ. ಪೋಷಕರು ಸಿರಿಧಾನ್ಯದ




ಆರೋಗ್ಯದ ಗುಟ್ಟನ್ನು ಮಕ್ಕಳಿಗೆ ತಿಳಿಸಬೇಕಿದೆ ಎಂದರು.

ಲಿಂಗಾಯತ ಮಹಿಳಾ ಸಮಾಜದಿಂದ ಕಾರ್ಯಕ್ರಮ ಹಮ್ಮಿಕೊಂಡಿದ್ದು ತುಂಬಾ ಖುಷಿಯ ವಿಚಾರ. ಎಲ್ಲಾ ಮಹಿಳೆಯರು ಸಿರಿಧಾನ್ಯಗಳಿಂದ ಅಡುಗೆ ಮಾಡಿದರೆ. ಆರೋಗ್ಯಕಾರಿ ಅಂಶಗಳು, ರೋಗ–ರುಜಿನಗಳನ್ನು ದೂರವಿರದರೊಂದಿಗೆ ನಮ್ಮ ಕುಟುಂಬಸ್ಥರನ್ನು ರಕ್ಷಿಸಿಕೊಳ್ಳಲು ಅನುಕೂಲಕಾರಕ, ದೀರ್ಘಕಾಲದ ಕಾಯಿಲೆಗಳಿಂದ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಲಿಂಗಾಯತ ಮಹಿಳಾ ಸಮಾಜದ ಅಧ್ಯಕ್ಷರಾದ ನೈನಾ ಗಿರಿಗೌಡರ ಮಾತನಾಡಿ, ಹಳ್ಳಿ ಸೊಗಡಿನ ಗೊಂಜಾಳದಿಂದ ಖಾರದ ಪದಾರ್ಥ, ಬೆಲ್ಲದಿಂದ ಹೋಳಿಗೆ ತಯಾರಿಕೆ ಸ್ಪರ್ಧೆಯನ್ನು ಆಯೋಜಿಸಿರುವುದು ಬಹಳಷ್ಟು ಸಂತಸ ತಂದಿದೆ.

ಗೋಂಜಾಳ ಅನ್ನುವುದು ಜಗತ್ತಿನ ದೊಡ್ಡ ಆಹಾರ ಪದಾರ್ಥ ಎಂದು ಹೇಳಬಹುದು ಗೋಂಜಾಳದಲ್ಲಿ ಬೇಕಾದಷ್ಟು ಪದಾರ್ಥಗಳನ್ನೂ ತಯಾರಿಸಬಹುದು ಸ್ವೀಟ್ ಕಾರ್ನ್ ಸೇರಿದಂತೆ ಅನೇಕ ಪಾರ್ಥಗಳನ್ನು ಎಲ್ಲರು ಸ್ವೀಕರಿಸಬಹುದು.

ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಎಲ್ಲ ಮಹಿಳೆಯರಿಗೂ ಈ ಕಾರ್ಯಕ್ರಮ ಅನುಕೂಲವಾಗಲಿ ಎಂದು ಹಾರೈಸಿದರು .

ಸ್ಪರ್ಧೆಯಲ್ಲಿ ಮಹಿಳೆಯರು ಸಜ್ಜಿರೊಟ್ಟಿ, ಶೆಂಗಾ ಚಟ್ಟಿ ಮೊಸರು, ಸಿರಿಧಾನ್ಯದಿಂದ ಮಾಡಿದ ರುಚಿಕರ ಆಹಾರ ಸ್ವೀಟ್ ಕಾರ್ನ,ಬೆಲ್ಲದಿಂದ ತಯಾರಿಸಿದ ಹೋಳಿಗೆ ತುಪ್ಪ ಹಾಗು ವೈವಿಧ್ಯಮಯ ಆಹಾರ ಪ್ರದರ್ಶನದಲ್ಲಿ ಕಣ್ಮನ ಸೆಳೆದವು.

ಈ ಸಂದರ್ಭದಲ್ಲಿ ಲಿಂಗಾಯತ ಮಹಿಳಾ ಸಮಾಜದ ಸಂಸ್ಥಾಪಕ ಅಧ್ಯಕ್ಷೆ ಶೈಲಗಾ ಬಿಂಗೆ, ಆಶಾ ಪಾಟೀಲ, ರತ್ನಪ್ರಭಾ ಬೆಲ್ಲದ, ಕಾರ್ಯದರ್ಶಿ ಕಾವೇರಿ ಕಿಲಾರಿ , ಸೇರಿದಂತೆ ಅನೇಕ ಮಹಿಳೆಯರು ಹಾಗೂ ಇತರರು ಇದ್ದರು.

## ಬೆಂಗಳೂರಿನಲ್ಲಿ ಬೀರೇಶ್ವರ ಕೋ ಅಪರೇಟಿವ್ ಬ್ಯಾಂಕ್ (ಮಲ್ಟಿ ಸ್ಟೇಟ್) ನ 196 ಮತ್ತು 197 ನೇ ಶಾಖೆಗಳು ಪ್ರಾರಂಭ

# ಬ್ಯಾಂಕ್ ಶಾಖೆ ಹೆಚ್ಚಿದಷ್ಟು ಜನ ಸಾಮಾನ್ಯರಿಗೆ ಅನುಕೂಲ: ಶಾಸಕ ಎಂ.ಕೃಷ್ಣಪ್ಪ



ಬೆಂಗಳೂರು: ಬೆಳಗಾವಿ ಮೂಲದ ದಕ್ಷಿಣ ಭಾರತದ ಪ್ರಮುಖ ಸಹಕಾರಿ ಸಂಸ್ಥೆ ಬೀರೇಶ್ವರ ಕೋ ಅಪರೇಟಿವ್ ಬ್ಯಾಂಕ್ (ಮಲ್ಟಿ ಸ್ಟೇಟ್) ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಳ್ಳುತ್ತಿದ್ದು, ಇಂದು ಉತ್ತರಹಳ್ಳಿಯ ಕೆಂಗೇರಿ ಮುಖ್ಯ ರಸ್ತೆಯ ಪೂರ್ಣ ಪ್ರಜ್ಞ ನಗರದಲ್ಲಿ 197 ನೇ ನೂತನ ಶಾಖೆ ಹಾಗೂ ಬನಶಂಕರಿ ಮೂರನೇ ಹಂತದಲ್ಲಿ 196 ನೇ ಶಾಖೆಗಳಿಗೆ ಚಾಲನೆ ನೀಡಲಾಯಿತು. ಬೀರೇಶ್ವರ ಕೋ ಅಪರೇಟಿವ್ ಬ್ಯಾಂಕ್ (ಮಲ್ಟಿ ಸ್ಟೇಟ್) ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾದಲ್ಲಿ ಬ್ಯಾಂಕ್ ತನ್ನ ಜಾಲವನ್ನು ಹೊಂದಿದೆ.

ಬ್ಯಾಂಕ್ ಒಟ್ಟು 3.54 ಲಕ್ಷ ಸದಸ್ಯರು ಮತ್ತು 3438 ಕೋಟಿ ರೂಪಾಯಿ ಠೇವಣಿ ಹೊಂದಿದೆ. 2731 ಕೋಟಿ ರೂಪಾಯಿ ಸಾಲ ಸೌಲಭ್ಯ ಒದಗಿಸಿ, 35.01 ಕೋಟಿ ರೂಪಾಯಿ ಲಾಭ ಗಳಿಸಿದೆ.

ಶಾಸಕ ಎಂ. ಕೃಷ್ಣಪ್ಪ ಅವರು ಪೂರ್ಣ ಪ್ರಜ್ಞ ನಗರದಲ್ಲಿ 197 ನೇ ನೂತನ ಶಾಖೆಗೆ ಚಾಲನೆ ನೀಡಿ ಶುಭ ಕೋರಿದರು. ನಮ್ಮ ಕ್ಷೇತ್ರದಲ್ಲಿ ಬ್ಯಾಂಕ್ ನ ಹೊಸ ಶಾಖೆ ಆರಂಭಿಸಿರುವುದು ಉತ್ತಮ ಬೆಳವಣಿಗೆ. ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಪ್ರತಿಯೊಬ್ಬರಿಗೂ ಬ್ಯಾಂಕ್ ಸೌಲಭ್ಯ ದೊರೆಯಬೇಕು. ಇದಕ್ಕಾಗಿ ಬ್ಯಾಂಕ್ ಶಾಖೆಗಳು ಹೆಚ್ಚಿದಷ್ಟು ಜನ ಸಾಮಾನ್ಯರಿಗೆ ಅನುಕೂಲವಾಗುತ್ತದೆ. ಬ್ಯಾಂಕ್ ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಲಾಕರ್ ವ್ಯವಸ್ಥೆ ಕಲ್ಪಿಸಬೇಕು ಎಂದು ಕಿವಿಮಾತು ಹೇಳಿದರು.

ಬೀರೇಶ್ವರ ಕೋ ಅಪರೇಟಿವ್ ಬ್ಯಾಂಕ್ ಎಕ್ಸಂಬಾದ ಉಪ ಪ್ರಧಾನ ವ್ಯವಸ್ಥಾಪಕರಾದ ಬಹಾದ್ದೂರ್ ಗುರುವ ಮಾತನಾಡಿ, ಕೋರ್ ಬ್ಯಾಂಕಿಂಗ್ ವಲಯದಲ್ಲಿ ಸಹಕಾರಿ ಬ್ಯಾಂಕ್ ಕಾರ್ಯನಿರ್ವಹಿಸುತ್ತಿದ್ದು, ಎಲ್ಲರನ್ನು ಹಣಕಾಸು ವಲಯಕ್ಕೆ ಸೇರ್ಪಡೆ ಮಾಡುವ ಮಹತ್ವಾಕಾಂಕ್ಷೆಯನ್ನು ಬ್ಯಾಂಕ್ ಹೊಂದಿದೆ. ಜನ ಸಾಮಾನ್ಯರಿಗೆ ಅನುಕೂಲ ಮಾಡುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದೇವೆ ಎಂದರು.

ಬನಶಂಕರಿ ಮೂರನೇ ಹಂತದಲ್ಲಿ 196 ನೇ ಶಾಖೆಗೆ ಬಸವನಗುಡಿ ಶಾಸಕರಾದ ರವಿ ಸುಬ್ರಮಣ್ಯ ಅವರು ಚಾಲನೆ ನೀಡಿದರು.

# ವೈಯಕ್ತಿಕ ಕಾಮಗಾರಿಗಳ ಸದುಪಯೋಗವಾಗಲಿ



ಬೆಳಗಾವಿ: ಉದ್ಯೋಗ ಖಾತರಿ ಯೋಜನೆಯ ಜೊತೆಗೆ ಇತರ ಉದ್ಯೋಗ ತರಬೇತಿ ಪಡೆದುಕೊಳ್ಳಬೇಕೆಂದು ಸಹಾಯಕ ನಿರ್ದೇಕರಾದ (ಗ್ರಾ.ಉ) ಸವಿತಾ ಎಮ್. ಅವರು ನರೇಗಾ ಕೂಲಿ ಕಾರರಿಗೆ ತಿಳಿಸಿದರು.

ತಾಲ್ಲೂಕಿನ ಕಲಖಾಂಬ ಗ್ರಾಮದ ಉದ್ಯೋಗ ಖಾತರಿ ಯೋಜನೆಯಡಿ ನಿರ್ಮಾಣ ಮಾಡಲಾದ ಹೊಸಕೆರೆ ಕಾಮಗಾರಿ ಸ್ಥಳದಲ್ಲಿ ಗುರುವಾರ ಡಿಸೆಂಬರ್ 28 ರಂದು ಆಯೋಜಿಸಿದ್ದ ರೋಜ್ಗಾರ ದಿನದ ಅಂಗವಾಗಿ ಅವರು ಮಾತನಾಡಿದರು.

ಉದ್ಯೋಗ ಖಾತರಿ ಯೋಜಯಡಿ 100 ದಿನ ಪೂರೈಸಿದ ಕೂಲಿಕಾರರು ಸ್ವಸಹಾಯ ಸಂಸ್ಥೆಯಿಂದ ಇತರ ತರಬೇತಿಯಗಳನ್ನು ಪಡೆದುಕೊಂಡು ತಮ್ಮ ಜೀವನದಲ್ಲಿ ಆರ್ಥಿಕವಾಗಿ ಸದೃಢರಾಗಬೇಕು.ನರೇಗಾ ಕೂಲಿಕಾರ್ಮಿಕರು ಕೇವಲ ಸಮುದಾಯ ಕಾಮಗಾರಿಗಳಿಗೆ ಅವಲಂಬಣೆಯಾಗದೆ, ವೈಯಕ್ತಿಕ ಕಾಮಗಾರಿಗಳನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಗೋಪಾಲ ಗೊಡಸಿ, ತಾಂತ್ರಿಕ ಸಂಯೋಜಕ ನಾಗರಾಜ ಯರಗುದ್ದಿ, ಐಇಸಿ ಸಂಯೋಜಕ ರಮೇಶ ಮಾದರ, ಗಣಕ ಯಂತ್ರ ನಿರ್ವಾಹಕ ನಾಗರಾಜ ಕಾಂಬಳೆ ಸೇರಿದಂತೆ ಗ್ರಾಮ ಪಂಚಾತಯ ಸಿಬ್ಬಂದಿಗಳು ಇದ್ದರು.

# ಬೆಳಗಾವಿ ಬೆಳವಣಿಗೆಗೆ ಗೋಗಟೆ ಪರಿವಾರದ ಕೊಡುಗೆ ಅನನ್ಯ: ಸಚಿವೆ ಲಕ್ಷ್ಮೀ ಹೆಬ್ಬಾಳಕರ್




ಬೆಳಗಾವಿ: ಎರಡನೇ ರಾಜಧಾನಿ ಯಾಗಿ ಬೆಳೆಯುತ್ತಿರುವ ಬೆಳಗಾವಿಗೆ ಗುಣಮಟ್ಟದ ಸೇವೆಯ ಮೂಲಕ ಗೊಗಟೆ ಪರಿವಾರ ಅನನ್ಯ ಕೊಡುಗೆ ನೀಡುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಗುರುವಾರ ಗೋಗಟೆ ಫ್ಲಾಜದಲ್ಲಿ ಪಿನ್ ಆ್ಯಂಡ್ ಲೇನ್ಸ್ – ಫನ್ ಝೋನ್ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಗೋಗಟೆ ಎಂದ ತಕ್ಷಣ ನಮಗೆಲ್ಲ ಕಾಲೇಜು, ಹೊಟೆಲ್ ನೆನಪಿಗೆ ಬರುತ್ತವೆ.

ಅವುಗಳ ಗುಣಮಟ್ಟದಿಂದಾಗಿ ಜನರ ಮನಸ್ಸಿನಲ್ಲಿ ನೆಲೆಯೂರಿವೆ. ಬೆಳಗಾವಿ ಕರ್ನಾಟಕ, ಮಹಾರಾಷ್ಟ್ರ ಮತ್ತು ಗೋವಾ ರಾಜ್ಯಗಳ ಮಧ್ಯವರ್ತಿ ಸ್ಥಳದಲ್ಲಿದೆ.

ಎಲ್ಲ ದೃಷ್ಟಿಯಿಂದ ಬೆಳೆಯಲು ಅವಕಾಶಗಳಿವೆ.

ಅದಕ್ಕೆ ಸರಕಾರದಿಂದ ಏನೆಲ್ಲ ಸಹಕಾರ ನೀಡಬೇಕೋ ಅದನ್ನು ನೀಡಲು ಸಿದ್ಧರಿದ್ದೇವೆ. ಬೆಳಗಾವಿ ಜನರಿಗೆ ಮನರಂಜನೆ ಒದಗಿಸಲು ಫನ್ ಝೋನ್ ಆರಂಭಿಸಿರುವುದು ಪ್ರಶಂಸಾರ್ಹವಾಗಿದೆ ಎಂದು ಸಚಿವರು ಹೇಳಿದರು.

ಗೋಗಟೆ ಸಮೂಹದ ಚೇರಮನ್ ಆನಂದ ಗೋಗಟೆ, ಮ್ಯಾನೇಜಿಂಗ್ ಡೈರೆಕ್ಟರ್ ಮಾಧವ ಗೋಗಟೆ, ಖ್ಯಾತ ಚಲನಚಿತ್ರ ನಟ ರಿತೇಶ್ ದೇಶಮುಖ್, ಬಹುಭಾಷಾ ನಟಿ ಜೆನಿಲಿಯಾ ಡಿಸೋಜಾ ಮೊದಲಾದವರಿದ್ದರು.

# ವಿಜ್ಞಾನ, ತಂತ್ರಜ್ಞಾನ ಜನರ ಶ್ರೇಯೋಭಿವೃದ್ಧಿಗೆ ಬಳಕೆಯಾಗಬೇಕು: ಇಸ್ರೋ ಅಧ್ಯಕ್ಷ ಎ.ಎಸ್. ಕಿರಣ್ ಕುಮಾರ್

## ಕೆಇಬಿ ಇಂಜಿನಿಯರ್ ಗಳ ಸಂಘದಿಂದ ತಾಂತ್ರಿಕ ಡೈರಿ ಬಿಡುಗಡೆ

ಬೆಂಗಳೂರು: ವಿಜ್ಞಾನ, ತಂತ್ರಜ್ಞಾನ ಜನ ಸಾಮಾನ್ಯರ ಶ್ರೇಯೋಭಿವೃದ್ಧಿಗೆ ಬಳಕೆಯಾಗಬೇಕು. ಇಲ್ಲವಾದಲ್ಲಿ ತಂತ್ರಜ್ಞಾನ ತನ್ನ ಮಹತ್ವ ಕಳೆದುಕೊಳ್ಳುತ್ತದೆ ಎಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್ ಕುಮಾರ್ ಹೇಳಿದರು.

ಕೆಇಬಿ ಇಂಜಿನಿಯರ್ ಗಳ ಸಂಘದಿಂದ ಕೆ.ಆರ್. ವೃತ್ತದ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ತಾಂತ್ರಿಕ ಡೈರಿ ಬಿಡುಗಡೆ ಮಾಡಿ ಸಂಘದ ಸುವರ್ಣ ಮಹೋತ್ಸವ ಸ್ಮಾರಕ ಉಪನ್ಯಾಸ ನೀಡಿದ ಅವರು, ಕಳೆದ 60 ರ ದಶಕದಿಂದ ಭಾರತದ ಬಾಹ್ಯಾಕಾಶ ವಲಯದ ಬೆಳವಣಿಗೆಗಳ ಬಗ್ಗೆ ಸಮಗ್ರವಾಗಿ ಬೆಳಕು ಚೆಲ್ಲಿದರು.

ಇಸ್ರೋ ಚಟುವಟಿಕೆಗಳು ದೇಶದ ಸಾಮಾಜಿಕ, ಆರ್ಥಿಕ ಬೆಳವಣಿಗೆಗೆ ಪೂರಕವಾಗಿವೆ. ಕೃಷಿ, ಶಿಕ್ಷಣ ಸೇರಿದಂತೆ ಎಲ್ಲಾ ವಲಯಗಳಿಗೂ ಅನುಕೂಲಕರವಾಗಿವೆ. ಇಸ್ರೋ ಆರು ದಶಕಗಳ ತನ್ನ ಯಾನದಲ್ಲಿ ಮಹತ್ವದ ಸಾಧನೆ ಮಾಡಿದೆ. ಪ್ರತಿ ಬಾರಿ ಉಪಗ್ರಹಗಳು ನಭೋಮಂಡಲಕ್ಕೆ ಚಿಮ್ಮಿದಾಗ ಭೂಮಂಡಲದ ಶ್ರೇಯೋಭಿವೃದ್ಧಿಯೇ ಪ್ರಮುಖ ಉದ್ದೇಶವಾಗಿರುತ್ತದೆ. ಭಾರತದಲ್ಲಿ ಮಾತ್ರ ಬಾಹ್ಯಾಕಾಶ ಕಾರ್ಯಕ್ರಮಗಳು ಮಿಲಿಟರಿಯೇತರ ಉದ್ದೇಶಕ್ಕೆ ಬಳಕೆಯಾಗುತ್ತಿವೆ ಎಂದು ಹೇಳಿದರು.



ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯಕಾರ್ಯದರ್ಶಿ ಗೌರವ್ ಗುಪ್ತ ಮಾತನಾಡಿ, ಕೋವಿಡ್ ನಂತರ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಇಂಧನ ಬಳಕೆಯಲ್ಲಿ ದಾಖಲೆ ನಿರ್ಮಾಣವಾಗಿದೆ. ಚೀನಾ ಸೇರಿದಂತೆ ಜಗತ್ತಿನ ಇತರೆ ಅಭಿವೃದ್ಧಿ ಹೊಂದಿದ ದೇಶಗಳಿಗೆ ಹೋಲಿಸಿದರೆ ಭಾರತ ಇಂಧನ ಬಳಕೆಯಲ್ಲಿ ಹಿಂದಿದೆ. ಇದೇ ರೀತಿ ಇಂಧನ ಮಿತವ್ಯಯ ವಲಯದಲ್ಲಿ ವ್ಯಾಪಕ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಕೃಷಿ ಪಂಪ್ ಸೆಟ್ ಗಳು ಶೇ 40 ರಷ್ಟು ವಿದ್ಯುತ್ ಬಳಸುತ್ತಿದ್ದು, ಇದೀಗ ವಿದ್ಯುತ್ ಚಾಲಿತ ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ವಿದ್ಯುತ್ ಬಳಕೆ ಹೆಚ್ಚಾಗುತ್ತಿದೆ ಎಂದರು.

ಕೆಇಬಿ ಇಂಜಿನೀಯರುಗಳ ಸಂಘದ ಅಧ್ಯಕ್ಷರಾದ ಕೆ. ಶಿವಣ್ಣ ಮಾತನಾಡಿ, ಇಂಧನ ವಲಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆದ್ಯತೆ ನೀಡುವ ಜೊತೆಗೆ ನೇಮಕಾತಿ ಘಟಕವನ್ನು ಸ್ಥಾಪಿಸಬೇಕು. ಇಂಜಿನಿಯರ್ ಗಳಿಗೆ ಬಡ್ತಿ ಮತ್ತಿತರೆ ಸೌಲಭ್ಯಗಳನ್ನು ಕಲ್ಪಿಸಬೇಕು. ಇಂಜಿನಿಯರ್ ಗಳ ಮೇಲಿನ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಿ ಪೂರ್ಣಗೊಳಿಸಬೇಕು. ವಿದ್ಯುತ್ ಅಪಘಾತಗಳ ಬಗ್ಗೆ ಲೋಕಾಯುಕ್ತ ಸಂಸ್ಥೆ ಮಧ್ಯ ಪ್ರವೇಶ ಸರಿಯಲ್ಲ. ಇದನ್ನು ಸರ್ಕಾರ ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಸಂಪುಟ: 4 ಸಂಚಿಕೆ: 277 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089